ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಪಟ್ಟಿ – ೧೫

ಒಟ್ಟು ಪ್ರಶ್ನೆಗಳು – ೮೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಶುಕ್ರವಾರ, ದಿನಾಂಕ : ೧೧ನೇ ಜುಲೈ, ೨೦೧೪**

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಭಾಗ್ಯಲಕ್ಷ್ಮೀ ಯೋಜನೆ ಅನುಷ್ಠಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೯೨೩ (೧೧೯೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ "ಭಾಗ್ಯಲಕ್ಷ್ಮೀ" ಯೋಜನೆಯನ್ನು ಎಂದಿನಿಂದ ಜಾರಿಗೆ ತರಲಾಯಿತು ; ಯೋಜನೆಯ ಪ್ರಗತಿ ವಿವರಗಳನ್ನು ಜಿಲ್ಲಾವಾರು ಹಾಗೂ ಗುಲ್ಬರ್ಗಾ ಪ್ರಾದೇಶಿಕ ವಿಭಾಗದ ಎಲ್ಲಾ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು ;

(ಆ) ಸದರಿ ಯೋಜನೆಯ ಫಲಾನುಭವಿಗಳಿಗೆ ಲಭ್ಯವಾಗುತ್ತಿರುವ ಉಪಯೋಗ ಲಾಭಗಳೇನು ; ಈ ಯೋಜನೆಯ ಸದುಪಯೋಗ ಪಡೆದ ಫಲಾನುಭವಿಗಳ ವಿವರಗಳನ್ನು ಯೋಜನೆ ಜಾರಿಗೆ ಬಂದಂದಿನಿಂದ ಈತನಕ ವರ್ಷವಾರು, ಜಿಲ್ಲಾವಾರು ಹಾಗೂ ಗುಲ್ಬರ್ಗಾ ಪ್ರಾದೇಶಿಕ ವಿಭಾಗದ ತಾಲ್ಲೂಕುವಾರು ವಿವರವಾದ ಮಾಹಿತಿಗಳನ್ನು ನೀಡುವುದು ?

## ರಾಜ್ಯ ಮತ್ತು ಕೇಂದ್ರಿಯ ಮಟ್ಟದ ವಿಶ್ವವಿದ್ಯಾಲಯಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೯೨೪ (೧೧೯೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಮತ್ತು ಕೇಂದ್ರಿಯ ಮಟ್ಟದ ವಿಶ್ವವಿದ್ಯಾಲಯಗಳು ಯಾವುವು (ಸಮಗ್ರ ವ್ಯಾಪ್ತಿ ಸ್ಥಳ ವಿವರ ನೀಡುವುದು) ;

(ಆ) ಈ ವಿಶ್ವವಿದ್ಯಾನಿಲಯಗಳಲ್ಲಿ ಮಂಜೂರಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಖಾಲಿ ಇರುವ ಹುದ್ದೆಗಳು, ವಿಶ್ವವಿದ್ಯಾಲಯವಾರು ಹುದ್ದೆವಾರು (ಬೋಧಕ ಬೋಧಕೇತರರು) ವಿವರ ನೀಡುವುದು ;

(ಇ) ಈ ವಿಶ್ವವಿದ್ಯಾಲಯಗಳಲ್ಲಿ ೨೦೧೨/೧೩/೧೪, ೨೦೧೪/೧೫ ರಲ್ಲಿ ಬೋಧಕ ಬೋಧಕೇತರರ ನೇಮಕಾತಿ ನಡೆಸಲಾಗಿದೆಯೇ ; ವಿಶ್ವವಿದ್ಯಾಲಯವಾರು, ಹುದ್ದೆವಾರು, ಸಂಪೂರ್ಣ ವಿವರ ನೀಡುವುದು ;

(ಈ) ಈ ನೇಮಕಾತಿ ಪ್ರಕ್ರಿಯೆಯಲ್ಲಿ ಸಂವಿಧಾನದ ಕಲಂ ೩೭೧(I) ಪ್ರಕಾರ ಮೀಸಲಾತಿ ನೀಡಲಾಗಿದೆಯೇ ; (ವಿಶ್ವವಿದ್ಯಾಲಯವಾರು, ಹುದ್ದೆವಾರು (ಬೋಧಕ ಬೋಧಕೇತರ) ಸಂಪೂರ್ಣ ವಿವರ ನೀಡುವುದು) ?

## ಗುಲ್ಬರ್ಗಾ-ಬೀದರ್ ರೈಲ್ವೆ ಯೋಜನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೯೨೫ (೧೧೯೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ-ಬೀದರ್ ರೈಲ್ವೆ ಲೈನ್ ಸುಮಾರು ವರ್ಷಗಳಿಂದ ನೆನೆಗುದಿಗೆ ಬೀಳಲು ಕಾರಣವೇನು ; ಈ ಯೋಜನೆಯಲ್ಲಿ ಪ್ರತಿಶತ ಎಷ್ಟು ಪ್ರಮಾಣದ ಕೆಲಸ ಕೈಗೊಳ್ಳಲಾಗಿದೆ ; ಬಾಕಿ ಉಳಿದ ಕಾಮಗಾರಿ ಕೈಗೊಳ್ಳುವುದು ಯಾವಾಗ (ವಿವರಿಸುವುದು) ;

(ಆ) ಈ ಯೋಜನೆಗೆ ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರದ ಪಾಲುದಾರಿಕೆ ಪ್ರತಿಶತ ಪ್ರಮಾಣವೆಷ್ಟು ; ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಮ್ಮ ಪಾಲಿನ ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಇನ್ನೂ ಬಿಡುಗಡೆ ಮಾಡಬೇಕಾದ ಅನುದಾನ ಎಷ್ಟು (ವಿವರಿಸುವುದು) ;

(ಇ) ಈ ಯೋಜನೆ ಪೂರ್ಣಗೊಳಿಸಿ ಕಾರ್ಯರೂಪಕ್ಕೆ ಬರುವುದು ಯಾವಾಗ ; ಇದಕ್ಕೆ ಸರ್ಕಾರ ವಿಶೇಷ ಆಸಕ್ತಿ ವಹಿಸುವುದೇ (ವಿವರಿಸುವುದು) ?

## ಐ.ಐ.ಟಿ. ಕಾಲೇಜು ಸ್ಥಾಪನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೯೨೬ (೧೧೬೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಐ.ಐ.ಟಿ. (I.I.T.) ಕಾಲೇಜು ಇಲ್ಲದೆ ಇರುವ ಸಂಗತಿ ನಿಜವೇ ;

(ಆ) ಡಾ॥ ನಂಜುಂಡಪ್ಪ ವರದಿಯಲ್ಲಿ ಹಿಂದುಳಿದ ಹೈ.ಕ. ಪ್ರದೇಶದ ರಾಯಚೂರಿನಲ್ಲಿ ಐ.ಐ.ಟಿ. (I.I.T.) ಕಾಲೇಜು ಸ್ಥಾಪಿಸಲು ಶಿಫಾರಸ್ಸು ಮಾಡಲಾಗಿದೆಯೇ (ವಿವರ ನೀಡುವುದು) ;

(ಇ) ಐ.ಐ.ಟಿ. ಕಾಲೇಜು ರಾಯಚೂರಿನಲ್ಲಿ ಸ್ಥಾಪಿಸುವ ನಿಟ್ಟಿನಲ್ಲಿ ಸರ್ಕಾರ ಈವರೆಗೆ ಕೈಗೊಂಡ ಕ್ರಮಗಳೇನು ;

(ಈ) ಕೇಂದ್ರ ಸರ್ಕಾರ ಈ ಐ.ಐ.ಟಿ. ಕಾಲೇಜುನ್ನು ಉತ್ತರ ಕರ್ನಾಟಕದಲ್ಲಿ ಸ್ಥಾಪಿಸುವ ಪ್ರಸ್ತಾವನೆ ರಾಜ್ಯಕ್ಕೆ ನೀಡಿದೆಯೆ ; ಇದ್ದರೆ, ಈ ನಿಟ್ಟಿನಲ್ಲಿ ರಾಯಚೂರಿಗೆ ಐ.ಐ.ಟಿ. ಕಾಲೇಜು ಯಾವಾಗ ಸ್ಥಾಪಿಸಿ ಈ ಭಾಗದ ಯುವಕರಿಗೆ ಪ್ರಯೋಜನ ಆಗುವ ಹಾಗೆ ಕ್ರಮ ಕೈಗೊಳ್ಳುವುದು (ಸಂಪೂರ್ಣ ವಿವರ ನೀಡುವುದು) ?

## ಹೈದರಾಬಾದ್–ಕರ್ನಾಟಕ ಭಾಗದ ಸ್ಥಾನದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೯೨೭ (೧೧೮೧) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್-ಕರ್ನಾಟಕ ಭಾಗದ ಕೇಂದ್ರ ಸ್ಥಾನದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ/ಪ್ರಚಾರ ಮಾಡುವ ನಿಟ್ಟಿನಲ್ಲಿ ಕಛೇರಿ ಸ್ಥಾಪಿಸಲಾಗಿದೆಯೇ (ಕಛೇರಿಯ ಸಿಬ್ಬಂದಿಗಳ ಸಂಪೂರ್ಣ ವಿವರ ನೀಡುವುದು) ;

(ಆ) ಪ್ರವಾಸೋದ್ಯಮ ಇಲಾಖೆಯಲ್ಲಿ ಕಳೆದ ಐದು ವರ್ಷಗಳಲ್ಲಿ ವಿವಿಧ ಯೋಜನೆಗಳಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ, ವಿಲೇಯಾದ ಅರ್ಜಿಗಳ ಸಂಖ್ಯೆ, ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ತಾಲ್ಲೂಕುವಾರು ವಿವರ ನೀಡುವುದು ;

(ಇ) ಬಾಕಿ ಇರುವ ಅರ್ಜಿಗಳು ಯಾವ ಕಾರಣಕ್ಕಾಗಿ ವಿಳಂಬವಾಗಿದೆ (ವಿವರ ನೀಡುವುದು) ;

(ಈ) ೨೦೧೨-೧೩ ರಿಂದ ಪ್ರಸಕ್ತ ಸಾಲಿನವರೆಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಹಾಗೂ ಹಿಂದುಳಿದ ವರ್ಗದವರಿಂದ ಟ್ಯಾಕ್ಸಿ ಸಾಲ ಕುರಿತು ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ (ಜಿಲ್ಲಾವಾರು ವಿವರ ನೀಡುವುದು) ;

(ಉ) ಅವುಗಳಲ್ಲಿ ಇದುವರೆಗೂ ಎಷ್ಟು ಜನ ಫಲಾನುಭವಿಗಳು ಆಯ್ಕೆಯಾಗಿದ್ದಾರೆ ; ಆಯ್ಕೆಯಾದ ಫಲಾನುಭವಿಗಳಿಗೆ ಟ್ಯಾಕ್ಸಿ ವಿತರಿಸಲಾಗಿದೆಯೇ ; ಇಲ್ಲವಾದ್ದಲ್ಲಿ ಕಾರಣಗಳೇನು ?

## ಅಂಗನವಾಡಿ ಕೇಂದ್ರಗಳು

**ಶ್ರೀ ಅಲ್ಲಮ ಪ್ರಭು ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೨೮ (೧೧೬೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ನೀಡುತ್ತಿರುವ ಪ್ರತಿ ತಿಂಗಳ ಗೌರವ ಧನ ಎಷ್ಟು ;

(ಇ) ಈ ಪ್ರತಿ ತಿಂಗಳ ಗೌರವ ಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿರುವ ಪೌಷ್ಠಿಕ ಆಹಾರದ ವೆಚ್ಚವೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ?

## ಅತಿಥಿ ಉಪನ್ಯಾಸಕರು

**ಶ್ರೀ ಅಲ್ಲಮ ಪ್ರಭು ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೨೯ (೧೧೬೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಉನ್ನತ ಶಿಕ್ಷಣದಲ್ಲಿ ತಂದಿರುವ ಬದಲಾವಣೆಗಳಲ್ಲಿ ಅನುಷ್ಠಾನ ಮಾಡಿ ಸಾಧಿಸಿರುವ ಪ್ರಗತಿ ಎಷ್ಟು (ವಿವರ ಒದಗಿಸುವುದು) ;

(ಆ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಭರ್ತಿ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು (ಕಾಲೇಜುವಾರು ವಿವರ ಒದಗಿಸುವುದು) ;

(ಇ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; ಇವರಿಗೆ ನೀಡುತ್ತಿರುವ ಮಾಸಿಕ ವೇತನವೆಷ್ಟು ?

## ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಪ್ರತ್ಯೇಕ ಆಯುಕ್ತಾಲಯ

**ಶ್ರೀ ಅಲ್ಲಮ ಪ್ರಭು ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೩೦ (೧೧೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಪ್ರತ್ಯೇಕವಾಗಿ ಆಯುಕ್ತಾಲಯ ಅಥವಾ ನಿರ್ದೇಶನಾಲಯ ಸ್ಥಾಪನೆ ಮಾಡಲು ಐ.ಐ.ಎಂ.ಬಿ. ಸಂಸ್ಥೆಯು ಸರ್ಕಾರಕ್ಕೆ ವರದಿ ಸಲ್ಲಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ತ್ವರಿತವಾಗಿ ಆಯುಕ್ತಾಲಯ ಅಥವಾ ನಿರ್ದೇಶನಾಲಯ ಸ್ಥಾಪಿಸಲು ಯಾವ ಕ್ರಮ ವಹಿಸಲಾಗುವುದು ;

(ಇ) ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸದರಿ ನೌಕರರಿಗೆ ಸರ್ಕಾರಿ ನೌಕರರಂತೆ ನಿವೃತ್ತಿ ಸೌಲಭ್ಯಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುವುದೇ ?

## ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಯೋಜನೆ

**ಶ್ರೀ ಅಲ್ಲಮ ಪ್ರಭು ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೩೧ (೧೧೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದರಾಬಾದ್ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೈಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಯೋಜನೆಯಲ್ಲಿ ಸೃಷ್ಟಿಸಿದ ಮಾನವ ದಿನಗಳು ಎಷ್ಟು ;

(ಇ) ಕೂಲಿಗಾರರಿಗೆ ನೀಡಿದ ಕೂಲಿಯ ವೆಚ್ಚವೆಷ್ಟು ; ಕೂಲಿಕಾರರಿಗೆ ನೀಡಬೇಕಾದ ಬಾಕಿ ಕೂಲಿಯ ಹಣ ಎಷ್ಟು ;

(ಈ) ಬಾಕಿ ಕೂಲಿ ಹಣ ಪಾವತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಯೋಜನೆ

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೩೨ (೧೧೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಬೆಳಗಾಂ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಇದರಲ್ಲಿ ಖರ್ಚಾದ ಹಣ ಎಷ್ಟು ;

(ಇ) ಬಿಡುಗಡೆಯಾದ ಅನುದಾನದಲ್ಲಿ ತರಬೇತಿಗೆ, ಮಾಹಿತಿ ಹಾಗೂ ಪ್ರಚಾರಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು (ಉದ್ಯೋಗ ಬಯಸಿ ನೋಂದಾಯಿಸಿದವರ ವಿವರ ಹಾಗೂ ಜಿಲ್ಲೆಯ ಗ್ರಾಮ ಪಂಚಾಯ್ತಿಯ ವಿವರ ನೀಡುವುದು) ?

## ರಾಜೀವ್ ಗಾಂಧಿ ವಸತಿ ನಿಗಮದ ಮನೆಗಳ ಮಂಜೂರಾತಿ

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೩೩ (೧೧೬೩) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

೨೦೧೩–೧೪ನೇ ಸಾಲಿನಲ್ಲಿ ಬೆಳಗಾಂ ಜಿಲ್ಲೆಯ ತಾಲ್ಲೂಕು ಪಂಚಾಯ್ತಿ ಮತ್ತು ಜಿಲ್ಲಾ ಪಂಚಾಯ್ತಿ ಅನುಮತಿ ಪಡೆದ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಬಾಕಿ ಇರುವ ಮನೆಗಳಿಗೆ ಮಂಜೂರಾತಿ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಂಜೂರಾತಿ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೩೪ (೧೧೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು (ಆಂಗ್ಲ ಮತ್ತು ಕನ್ನಡ ಮಾಧ್ಯಮ) ತೆರೆಯಲು ಎಷ್ಟು ಅರ್ಜಿಗಳು ಬಂದಿವೆ (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು) ;

(ಆ) ಅವುಗಳಲ್ಲಿ ಎಷ್ಟು ಶಾಲೆಗಳನ್ನು ತೆರೆಯಲು ಮಂಜೂರಾತಿ ನೀಡಲಾಗಿದೆ (ಆಂಗ್ಲ ಮತ್ತು ಕನ್ನಡ ಮಾಧ್ಯಮವಾರು, ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು) ?

## ಪ್ರವಾಸೋದ್ಯಮ ಕೇಂದ್ರಗಳ ಅಭಿವೃದ್ಧಿ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೩೫ (೧೧೭೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಕೇಂದ್ರಗಳನ್ನಾಗಿ ಗುರುತಿಸಿರುವ ಸ್ಥಳಗಳಾವುವು ; ಅವುಗಳ ಅಭಿವೃದ್ಧಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಕಳೆದ ೩ ವರ್ಷಗಳಲ್ಲಿ ಈ ಕೇಂದ್ರಗಳಿಗೆ ಬಿಡುಗಡೆ ಮಾಡಿರುವ ಹಣವೆಷ್ಟು (ಕೇಂದ್ರವಾರು ಮಾಹಿತಿ ಒದಗಿಸುವುದು) ;

(ಇ) ೨೦೧೪-೧೫ನೇ ಸಾಲಿನಲ್ಲಿ ಯಾವ ಯಾವ ಕೇಂದ್ರಗಳನ್ನು ಅಭಿವೃದ್ಧಿಪಡಿಸಲಾಗುವುದು (ವಿವರಗಳೊಂದಿಗೆ) ;

(ಈ) ಸದರಿ ಅಭಿವೃದ್ಧಿ ಕಾಮಗಾರಿಗಳು ಈಗ ಯಾವ ಹಂತದಲ್ಲಿವೆ ?

**ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು**

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೩೬ (೧೧೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮೂಲಕ ಎಷ್ಟು ಹಳ್ಳಿಗಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸಲು ಕ್ರಮ ಕೈಗೊಳ್ಳಲಾಗಿದೆ ;

(ಆ) ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಹೆಸರು, ಅವುಗಳು ಒಳಗೊಳ್ಳಲಿರುವ ಹಳ್ಳಿಗಳ ಹೆಸರನ್ನು ಒದಗಿಸುವುದು ; ಈ ಯೋಜನೆಗೆ ಒದಗಿಸಿರುವ ಅನುದಾನ ಎಷ್ಟು ; ಈ ಕಾಮಗಾರಿಗಳು ಯಾವಾಗ ಆರಂಭವಾಗಲಿದೆ ;

(ಇ) ಈ ಯೋಜನೆಗಳನ್ನು ಯಾವಾಗ ಪೂರ್ಣಗೊಳಿಸಿ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲಾಗುವುದು (ಈ ಯೋಜನೆಗಳ ಪೂರ್ಣ ವಿವರ ಒದಗಿಸುವುದು) ?

## ಹೊರಾಂಗಣ ಚಿತ್ರೀಕರಣಕ್ಕೆ ಏಕಗವಾಕ್ಷಿ ಯೋಜನೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೩೭ (೧೨೧೧) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿನಿಮಾಗಳ ಹೊರಾಂಗಣ ಚಿತ್ರೀಕರಣಕ್ಕೆ ಅನುಮತಿ ನೀಡಲು ಏಕಗವಾಕ್ಷಿ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ; ಈ ಮೂಲಕ ಕನ್ನಡ ಹಾಗೂ ಇತರ ಭಾಷೆಗಳ ಚಲನಚಿತ್ರಗಳ ಚಿತ್ರೀಕರಣಕ್ಕೆ ಅನುಕೂಲ ಕಲ್ಪಿಸಲಾಗುವುದೇ ;

(ಆ) ಹೊರಾಂಗಣ ಚಿತ್ರೀಕರಣಕ್ಕೆ ಅನೇಕ ಇಲಾಖೆಗಳ ಅನುಮತಿ ಅಗತ್ಯವಾಗಿದ್ದು, ಇದರಿಂದ ರಾಜ್ಯದಲ್ಲಿ ಅನ್ಯ ಭಾಷೆಯ ಸಿನಿಮಾಗಳ ಚಿತ್ರೀಕರಣ ಕಡಿಮೆ ಆಗಿದ್ದು, ರಾಜ್ಯಕ್ಕೆ ಬರಬೇಕಾದ ಆದಾಯ ಮತ್ತು ಪ್ರವಾಸಿ ಸ್ಥಳಗಳ ಬಗ್ಗೆ ಪ್ರಚಾರ ಕಡಿಮೆ ಆಗಿಲ್ಲವೇ ;

(ಇ) ವಿಷ್ಣುವರ್ಧನ್ ಸ್ಮಾರಕ ನಿರ್ಮಾಣ ಕಾಮಗಾರಿ ಆರಂಭವಾಗಿದೆಯೇ ; ಇದಕ್ಕೆ ಒದಗಿಸಿರುವ ಅನುದಾನ ಎಷ್ಟು (ವಿವರ ಒದಗಿಸುವುದು) ;

(ಈ) ಕಂಠೀರವ ಸ್ಟುಡಿಯೋ ಪುನಃಶ್ಚೇತನ ಕೈಗೊಂಡಿರುವ ಕ್ರಮಗಳೇನು ; ಇದಕ್ಕೆ ಒದಗಿಸಿರುವ ಅನುದಾನ ಎಷ್ಟು (ವಿವರ ಒದಗಿಸುವುದು) ;

(ಉ) ಚಲನಚಿತ್ರ ಕಾರ್ಮಿಕರ ದತ್ತಿ ನಿಧಿಯಿಂದ ಇದುವರೆಗೆ ಎಷ್ಟು ಜನ ಅಶಕ್ತ ಕಾರ್ಮಿಕರು, ತಂತ್ರಜ್ಞರು ಮತ್ತು ಕಲಾವಿದರುಗಳಿಗೆ ಸಹಾಯಧನ ನೀಡಲಾಗಿದೆ ; ಇದರ ಮೊತ್ತ ಎಷ್ಟು ; ಈ ನಿಧಿಯ ಮೂಲ ಧನವನ್ನು ಹೆಚ್ಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಖಾಲಿ ಇರುವ ಶಿಕ್ಷಕರು/ಉಪನ್ಯಾಸಕರ ಹುದ್ದೆಗಳು

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೩೮ (೧೧೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಾಲಿ ಇರುವ ಪ್ರಾಥಮಿಕ–ಪ್ರೌಢ ಮತ್ತು ಜೂನಿಯರ್ ಕಾಲೇಜು ಶಿಕ್ಷಕರು/ಉಪನ್ಯಾಸಕರ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ಒದಗಿಸುವುದು) ;

(ಆ) ಈ ಶೈಕ್ಷಣಿಕ ವರ್ಷದಲ್ಲಿ ನಿವೃತ್ತರಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರ ಹುದ್ದೆ ಎಷ್ಟು ;

(ಇ) ಈ ಶೈಕ್ಷಣಿಕ ವರ್ಷಕ್ಕೆ ಎಷ್ಟು ಜನ ಶಿಕ್ಷಕರುಗಳನ್ನು, ಉಪನ್ಯಾಸಕರುಗಳನ್ನು ಖಾಯಂ ಆಗಿ ನೇಮಿಸಿಕೊಳ್ಳಲು ಹಾಗೂ ಎಷ್ಟು ಜನ ಶಿಕ್ಷಕರನ್ನು ಉಪನ್ಯಾಸಕರನ್ನು ಅತಿಥಿ ಶಿಕ್ಷಕರು, ಉಪನ್ಯಾಸಕರನ್ನಾಗಿ ನೇಮಿಸಲು ಉದ್ದೇಶಿಸಲಾಗಿದೆ (ವಿವರ ಒದಗಿಸುವುದು) ?

## ಅಂಗನವಾಡಿ ಕೇಂದ್ರಗಳ ಪುನರಾರಂಭ

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೩೯ (೧೧೮೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಎಷ್ಟು ಅಂಗನವಾಡಿ ಕೇಂದ್ರಗಳಲ್ಲಿ ಶಿಕ್ಷಕಿಯರು/ಸಹಾಯಕರು ಸೇವೆ ಸಲ್ಲಿಸುತ್ತಿದ್ದಾರೆ (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಎಷ್ಟು ಅಂಗನವಾಡಿ ಕೇಂದ್ರಗಳಲ್ಲಿ ಶಿಕ್ಷಕಿಯರ ಮತ್ತು ಸಹಾಯಕರ ಕೊರತೆ ಇದೆ (ತಾಲ್ಲೂಕುವಾರು ವಿವರ ನೀಡುವುದು) ;

(ಈ) ಅಂಗನವಾಡಿ ಶಿಕ್ಷಕಿಯರ ಮತ್ತು ಸಹಾಯಕರ ಕೊರತೆಯಿಂದ ಎಷ್ಟು ಕೇಂದ್ರಗಳನ್ನು ಮುಚ್ಚಲಾಗಿದೆ ಮತ್ತು ಸ್ಥಳಾಂತರಿಸಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು) ;

(ಉ) ಮುಚ್ಚಲಾದ ಮತ್ತು ಸ್ಥಳಾಂತರಿಸಲಾದ ಕೇಂದ್ರಗಳನ್ನು ಪುನಃ ಯಾವಾಗ ಪ್ರಾರಂಭಿಸಲಾಗುವುದು ?

## ಪದವಿ ಕಾಲೇಜುಗಳಿಗೆ ಕಂಪ್ಯೂಟರ್ ಸೌಲಭ್ಯ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೪೦ (೧೧೮೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಎಷ್ಟು ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕಂಪ್ಯೂಟರ್‌ಗಳ ಸೌಲಭ್ಯ ಒದಗಿಸಲಾಗಿದೆ (ತಾಲ್ಲೂಕುವಾರು, ಕಾಲೇಜುವಾರು ವಿವರ ನೀಡುವುದು) ;

(ಆ) ಜಿಲ್ಲೆಯಲ್ಲಿರುವ ಒಟ್ಟು ಪದವಿ ಕಾಲೇಜುಗಳೆಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಕಂಪ್ಯೂಟರ್ ಸೌಲಭ್ಯ ವಂಚಿತ ಕಾಲೇಜುಗಳಿಗೆ ಶೀಘ್ರವಾಗಿ ಕಂಪ್ಯೂಟರ್ ಒದಗಿಸಲಾಗುವುದೇ ?

## ಮುಚ್ಚಲ್ಪಟ್ಟ ಮತ್ತು ಬೇಡಿಕೆಗೆ ಸ್ಥಳಾಂತರಿಸಲಾದ ಶಾಲೆಗಳ ಪುನರಾರಂಭ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೪೧ (೧೧೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಒಟ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಇವುಗಳಲ್ಲಿ ಎಷ್ಟು ಶಾಲೆಗಳನ್ನು ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಕೊರತೆಯಿಂದಾಗಿ ಪ್ರಸಕ್ತ ವರ್ಷ ಮುಚ್ಚಲ್ಪಟ್ಟಿವೆ ಹಾಗೂ ಬೇರೆಡೆಗೆ ಸ್ಥಳಾಂತರಿಸಲಾಗಿದೆ ಮತ್ತು ಎಲ್ಲೆಲ್ಲಿ ಎನ್ನುವ ಬಗ್ಗೆ ವಿವರ ನೀಡುವುದು (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಕೊರತೆಯಿಂದ ಮುಚ್ಚಲ್ಪಟ್ಟ ಮತ್ತು ಬೇರೆಡೆಗೆ ಸ್ಥಳಾಂತರಿಸಲಾದ ಶಾಲೆಗಳ ಪುನರಾರಂಭಕ್ಕೆ ಸರ್ಕಾರ ಏನು ಕ್ರಮಕೈಗೊಳ್ಳಲಿದೆ ?

## ಎನ್.ಆರ್.ಇ.ಜಿ. ಯೋಜನೆಯಡಿ ಬರುವ ಕಾಮಗಾರಿಗಳು

**ಶ್ರೀ ಸಯದ್ ಮುದೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೪೨ (೧೨೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯತಿಗಳಲ್ಲಿ ಎನ್.ಆರ್.ಇ.ಜಿ. ಯೋಜನೆಯಡಿ ಬರುವ ಕಾಮಗಾರಿಗಳನ್ನು ಪರಿಶೀಲಿಸಿ ದೃಢೀಕರಿಸುವ ಅಧಿಕಾರವನ್ನು ಯಾರಿಗೆ ವಹಿಸಲಾಗಿದೆ ;

(ಆ) ಖಾಸಗಿ ಸಂಸ್ಥೆಯೊಂದಕ್ಕೆ ಈ ಅಧಿಕಾರ ನೀಡಿರುವುದರಿಂದ ಎನ್.ಆರ್.ಇ.ಜಿ. ಕಾಮಗಾರಿಗಳಿಗೆ ಅನಾನುಕೂಲವಾಗುತ್ತಿರುವ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ವ್ಯವಸ್ಥೆಯನ್ನು ರದ್ದುಗೊಳಿಸಿ ಹಿಂದಿನ ವ್ಯವಸ್ಥೆಯನ್ನೇ ಮುಂದುವರೆಸುವ ಬಗ್ಗೆ ಸರ್ಕಾರವು ಚಿಂತನೆ ಮಾಡಿದೆಯೇ ?

## ನಾಗವಳ್ಳಿ ಗ್ರಾಮ ಪಂಚಾಯತ್ ಸಿಬ್ಬಂದಿ

**ಶ್ರೀ ಸಯದ್ ಮುದೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೪೩ (೧೨೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ತಾಲ್ಲೂಕಿನ ನಾಗವಳ್ಳಿ ಗ್ರಾಮ ಪಂಚಾಯತಿಗೆ ಕಳೆದ ೩ ವರ್ಷಗಳಿಂದ ನೀಡಿರುವ ವಿವಿಧ ಅನುದಾನಗಳು ಯಾವುವು (ವರ್ಷವಾರು ವಿವರ ನೀಡುವುದು) ;

(ಆ) ಚಾಮರಾಜನಗರ ತಾಲ್ಲೂಕಿನ ನಾಗವಳ್ಳಿ ಗ್ರಾಮ ಪಂಚಾಯಿತಿಗೆ ಕಳೆದ ೩ ವರ್ಷಗಳಿಂದ ಆಶ್ರಯ ಮನೆ ಯೋಜನೆ ಇಂದಿರಾ ಅವಾಜ್ ಮತ್ತು ಬಸವ ವಸತಿ ಯೋಜನೆಯಡಿ ಹಂಚಿಕೆ ಮಾಡಲಾದ ಮನೆಗಳ ಫಲಾನುಭವಿಗಳ ವಿವರ ನೀಡುವುದು (ಹೆಸರು ಮತ್ತು ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು) ;

(ಇ) ಇವುಗಳಲ್ಲಿ ಅರ್ಹ ಫಲಾನುಭವಿಗಳಿಗೆ ಸರಿಯಾಗಿ ಹಂಚಿಕೆಯಾಗದೆ ಮಧ್ಯವರ್ತಿಗಳ ಪಾಲಾಗಿರುವುದು ನಿಜವೇ ; ಹಾಗಿದ್ದಲ್ಲಿ, ಸಂಬಂಧಪಟ್ಟವರ ಮೇಲೆ ಕೈಗೊಂಡ ಕ್ರಮವೇನು ;

(ಈ) ಸದರಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಹುದ್ದೆಗಳೆಷ್ಟು (ವಿವರ ನೀಡುವುದು) ?

## ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ

**ಶ್ರೀ ಸಯದ್ ಮುದೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೯೪೪ (೧೧೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ ರಲ್ಲಿ ಕೇಂದ್ರ ಸರ್ಕಾರ ರೂಪಿಸಿದ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಯನ್ವಯ ರಾಜ್ಯಕ್ಕೆ ಬಂದಿರುವ ಅನುದಾನ ಎಷ್ಟು ;

(ಆ) ಅದನ್ನು ಜಿಲ್ಲಾವಾರು ಯಾವ ರೀತಿ ನೀಡಲಾಗಿದೆ ;

(ಇ) ಕಾರ್ಯಕ್ರಮದ ಪ್ರಗತಿ ಆಗಿರುವುದು ಎಷ್ಟು ?

## ಪ್ರತ್ಯೇಕ ನಿರ್ದೇಶನಾಲಯ ಮತ್ತು ಆಯುಕ್ತರ ಕಛೇರಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೪೫ (೧೧೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಪ್ರತ್ಯೇಕ ನಿರ್ದೇಶನಾಲಯ ಮತ್ತು ಆಯುಕ್ತರ ಕಛೇರಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ತೊಂದರೆ ಉಂಟಾಗುವುದನ್ನು ಸರ್ಕಾರ ಗಮನಿಸಿದೆಯೇ ;

03375-3

(ಇ) ನಿರ್ದೇಶನಾಲಯ ಮತ್ತು ಆಯುಕ್ತರ ಕಛೇರಿ ತೆರೆಯಲು ಐಐಬಿಎಮ್ ಸಂಸ್ಥೆಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ; ಸಲ್ಲಿಸಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು (ವಿವರ ನೀಡುವುದು) ?

## ಗ್ರಾಮ ಪಂಚಾಯತ್ ಕಂಪ್ಯೂಟರ್ ಅಪರೇಟರ್‌ಗಳನ್ನು ಇಲಾಖಾ ನೌಕರರನ್ನಾಗಿ ನೇಮಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೪೬ (೧೧೮೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ :-

(ಅ) ರಾಜ್ಯದಲ್ಲಿ ಎಲ್ಲಾ ಪಂಚಾಯತಿಗಳಲ್ಲಿ ಕಂಪ್ಯೂಟರ್ ಆಪರೇಟರ್‌ಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ (ತಾಲ್ಲೂಕುವಾರು, ಜಿಲ್ಲಾವಾರು, ಪಂಚಾಯತಿವಾರು ಪೂರ್ಣ ವಿವರ ನೀಡುವುದು) ;

(ಆ) ಹಾಗಿದ್ದಲ್ಲಿ, ಅವರಿಗೆ ವೇತನವನ್ನು ಯಾವ ನಿಧಿಯಿಂದ ನೀಡಲಾಗುತ್ತಿದೆ ;

(ಇ) ಸದರಿ ಕಂಪ್ಯೂಟರ್ ಆಪರೇಟರ್‌ಗಳು ಗ್ರಾಮ ಪಂಚಾಯತಿ ಸಿಬ್ಬಂದಿಗಳೇ ;

(ಈ) ಸದರಿ ನೌಕರರನ್ನು ಪಂಚಾಯತ್ ರಾಜ್ ಕಾಯ್ದೆಯಂತೆ ಪಂಚಾಯತ್ ರಾಜ್ ಸಿಬ್ಬಂದಿಗಳನ್ನಾಗಿ ನೇಮಕ ಮಾಡಿಕೊಳ್ಳಲು ಸರ್ಕಾರಕ್ಕಿರುವ ತೊಂದರೆಯೇನು (ಪೂರ್ಣ ವಿವರ ನೀಡುವುದು) ;

(ಉ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪಡಿತರ ಚೀಟಿಯಿಂದ ವಸೂಲಾದ ಹಣ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :-

೯೪೭ (೧೧೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ಪಂಚಾಯತಿಗಳಲ್ಲಿ ಪಡಿತರ ಚೀಟಿಯಿಂದ ವಸೂಲಾದ ಹಣವೆಷ್ಟು ;

(ಆ) ಸದರಿ ಹಣವನ್ನು ಗ್ರಾಮ ಪಂಚಾಯತಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಗೆ ಜಮಾ ಮಾಡಲಾಗಿದೆಯೇ (ಲೆಕ್ಕ ಶೀರ್ಷಿಕೆಯ ವಿವರ ನೀಡುವುದು) ;

(ಇ) ಎಷ್ಟು ಹಣವನ್ನು ಜಮಾ ಮಾಡಲಾಗಿದೆ ; ಎಷ್ಟು ಹಣವನ್ನು ಜಮಾ ಮಾಡಬೇಕಿದೆ (ಪೂರ್ಣ ವಿವರ ನೀಡುವುದು) ;

(ಈ) ಪಡಿತರ ಚೀಟಿಯ ಹಣವನ್ನು ಆಯಾ ಪಂಚಾಯತಿಗೇ ಜಮಾ ಮಾಡಿ ಅಭಿವೃದ್ಧಿ ಕಾರ್ಯಕ್ಕೆ ವಿನಿಯೋಗಿಸಲು ಸಹಾಯಕವಾಗಲು ಸರ್ಕಾರಕ್ಕಿರುವ ತೊಂದರೆಯೇನು (ವಿವರ ನೀಡುವುದು);

(ಉ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಗುಲಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಯಾತ್ರಿ ನಿವಾಸ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೪೮ (೧೧೭೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಕಾರ್ಯನಿರ್ವಹಿಸುತ್ತಿರುವ ಒಟ್ಟು ಯಾತ್ರಿ ನಿವಾಸಗಳೆಷ್ಟು (ತಾಲ್ಲೂಕುವಾರು ಸ್ಥಳವಾರು ವಿವರ ನೀಡುವುದು) ;

(ಆ) ಇವುಗಳಲ್ಲಿ ಪೂರ್ಣ ಪ್ರಮಾಣದ ಸೌಲಭ್ಯ ಹೊಂದಿರುವ ಸೌಲಭ್ಯ ಬಾಕಿ ಇರುವ ಹಾಗೂ ಯಾತ್ರಿಗಳ ಉಪಯೋಗಕ್ಕೆ ನೀಡಲಾಗಿರುವ ಯಾತ್ರಿ ನಿವಾಸಗಳೆಷ್ಟು ; ಅವು ಯಾವುವು ;

(ಇ) ಈ ಯಾತ್ರಿ ನಿವಾಸಗಳಿಂದ ಬರುವ ಆದಾಯ ಹಾಗೂ ನಿರ್ವಹಣಾ ವೆಚ್ಚ ಎಷ್ಟು ?

## ಸಣ್ಣ ಪತ್ರಿಕೆಗಳಿಗೆ ಜಾಹೀರಾತು

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೪೯ (೧೨೨೧) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಣ್ಣ ಪತ್ರಿಕೆಗಳಿಗೆ ಜಾಹೀರಾತು ನೀಡುವ ಸಂಬಂಧ ರಾಜ್ಯ ವಾರ್ತಾ ಇಲಾಖೆ ಪರಿಷ್ಕೃತ ಜಾಹೀರಾತು ನೀತಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಇದುವರೆವಿಗೂ ಜಾರಿಗೊಳಿಸದೆ ಇರುವುದರಿಂದ ಸಣ್ಣ ಪತ್ರಿಕೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪರಿಷ್ಕೃತ ಜಾಹೀರಾತು ನೀತಿಯನ್ನು ಜಾರಿಗೆ ತರಲು ಸರ್ಕಾರಕ್ಕಿರುವ ತೊಂದರೆಗಳೇನು (ಪೂರ್ಣ ಮಾಹಿತಿ ನೀಡುವುದು) ;

(ಇ) ಈ ಪರಿಷ್ಕೃತ ಜಾಹೀರಾತು ನೀತಿಯನ್ನು ಜಾರಿಗೆ ಯಾವಾಗ ತರಲಾಗುವುದು (ಪೂರ್ಣ ಮಾಹಿತಿ ನೀಡುವುದು) ?

## ಉನ್ನತ ಶಿಕ್ಷಣಕ್ಕಾಗಿ ಬ್ಯಾಂಕಿನ ಸಾಲ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೫೦ (೧೧೯೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉನ್ನತ ಶಿಕ್ಷಣಕ್ಕಾಗಿ ವಿದ್ಯಾರ್ಥಿಗಳು ಯಾವ ಬ್ಯಾಂಕಿನಲ್ಲಿ ಸಾಲ ಪಡೆಯಬಹುದಾಗಿರುತ್ತದೆ ;

(ಆ) ಈ ಸಾಲವನ್ನು ವಿದ್ಯಾರ್ಥಿಗಳು ಯಾವ ರೀತಿಯಲ್ಲಿ ಮರುಪಾವತಿ ಮಾಡಬೇಕಾಗುತ್ತದೆ ;

(ಇ) ಸಾಲ ಪಡೆದ ವಿದ್ಯಾರ್ಥಿಗಳಿಗೆ ಪ್ರಸ್ತುತ ಸರ್ಕಾರದಲ್ಲಿ ಬಡ್ಡಿಯನ್ನು ಮನ್ನಾ ಮಾಡಲಾಗಿದೆಯೇ ;

(ಈ) ಬಡ್ಡಿ ಮನ್ನಾ ಮಾಡಲಾಗಿದ್ದರೆ, ಮಂಡ್ಯ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳು ಉನ್ನತ ಶಿಕ್ಷಣಕ್ಕಾಗಿ ಸಾಲ ಪಡೆದಿರುವರು (ಬಡ್ಡಿ ಮನ್ನಾ ಮಾಡಲಾಗಿರುವ ಬಗ್ಗೆ ಪೂರ್ಣ ಮಾಹಿತಿ ನೀಡುವುದು) ?

## ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಸದಸ್ಯರಿಗೆ ಗೌರವಧನ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೫೧ (೧೧೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ, ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ನೀಡುತ್ತಿರುವ ಗೌರವಧನವೆಷ್ಟು ;

(ಆ) ಹಾಲಿ ನೀಡುತ್ತಿರುವ ಗೌರವಧನ ಕಡಿಮೆ ಎನಿಸುವುದಿಲ್ಲವೇ ; ಇದನ್ನು ಹೆಚ್ಚಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಇ) ಗ್ರಾಮ ಪಂಚಾಯತಿ ಸದಸ್ಯರಿಗೆ ಸುಮಾರು ೫-೮ ತಿಂಗಳಿನಿಂದ ಗೌರವ ಧನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಮಾಹೆಯಾನ ಗೌರವಧನ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು (ಪೂರ್ಣ ಮಾಹಿತಿ ನೀಡುವುದು) ?

## ವಸತಿ ಸೌಕರ್ಯ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೫೨ (೧೨೧೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾನ್ಯ ಮುಖ್ಯಮಂತ್ರಿಗಳು ಪ್ರಮಾಣ ವಚನ ಸ್ವೀಕರಿಸಿದ ಮೊದಲನೇ ಸಚಿವ ಸಂಪುಟ ಸಭೆಯಲ್ಲಿ ಪ್ರತಿ ಗ್ರಾಮ

ಪಂಚಾಯತಿಗೆ ೨೦ ಮನೆಗಳಂತೆ ಮತ್ತು ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಒಟ್ಟು ೨೦ ಸಾವಿರ ಮನೆಗಳನ್ನು ನೀಡಲು ಸರ್ಕಾರ ಘೋಷಣೆ ಮಾಡಲಾಗಿತ್ತೇ ;

(ಆ) ಘೋಷಣೆ ಮಾಡಿದ್ದಲ್ಲಿ, ಕಳೆದ ವರ್ಷ ಎಷ್ಟು ಮನೆಗಳನ್ನು ಗ್ರಾಮ ಪಂಚಾಯತಿ/ಸ್ಥಳೀಯ ಸಂಸ್ಥೆಗಳಿಗೆ ಹಂಚಿಕೆ ಮಾಡಲಾಗಿದೆ ; ಹಂಚಿಕೆ ಮಾಡಿದ್ದಲ್ಲಿ, ಈ ಫಲಾನುಭವಿಗಳಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ (ವಿವರ ನೀಡುವುದು) ;

(ಇ) ೨೦೧೩–೧೪ನೇ ಸಾಲಿನಲ್ಲಿ ಎಷ್ಟು ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡಿದೆ ; ಬಿಡುಗಡೆ ಮಾಡಿದ ಅನುದಾನವು ಸಂಪೂರ್ಣ ಖರ್ಚಾಗಿದೆಯೇ ; ಆಗಿಲ್ಲದಿದ್ದಲ್ಲಿ, ಈ ಸಾಲಿನಲ್ಲಿ ಉಳಿದಿರುವ ಅನುದಾನವೆಷ್ಟು (ಸಂಪೂರ್ಣ ವಿವರ ನೀಡುವುದು) ;

(ಈ) ೨೦೧೩–೧೪ರ ಆಯ–ವ್ಯಯದಲ್ಲಿ ೩ ಲಕ್ಷ ಮನೆಗಳನ್ನು ನಿರ್ಮಿಸಲು ಘೋಷಿಸಲಾಗಿತ್ತೇ ; ಘೋಷಿಸಿದ್ದಲ್ಲಿ, ಈಗಾಗಲೇ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು (ಹಿಂದಿನ ಸಾಲಿನ ಪ್ರಗತಿಯನ್ನು ಹೊರತುಪಡಿಸಿ, ಈ ಬಗ್ಗೆ ಸಂಪೂರ್ಣ ವಿವರ ಒದಗಿಸುವುದು) ?

## ಕಾವೇರಿ ನದಿ ತೀರದಲ್ಲಿ ಮೆಟ್ಟಿಲುಗಳ ನಿರ್ಮಾಣ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೫೩ (೧೨೨೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪವಿತ್ರ ಯಾತ್ರಾ ಸ್ಥಳ ಹಾಗೂ ತಲಕಾಡಿನ ಪಂಚಲಿಂಗಗಳಲ್ಲಿ ಒಂದಾದ ಮುಡುಕುತೊರೆ ಬಳಿ ಹರಿಯುವ ಕಾವೇರಿ ನದಿ

ದಡದಲ್ಲಿ ಮೆಟ್ಟಿಲುಗಳು ಇಲ್ಲದೇ (ಈಗಿರುವ ಮೆಟ್ಟಿಲುಗಳು ಅಸಮರ್ಪಕವಾಗಿದ್ದು) ಸ್ನಾನ ಮಾಡುವ ಭಕ್ತಾಧಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತುಂಬಾ ಪುರಾತನ ಕಾಲದ ಕಲ್ಲಿನ ಮೆಟ್ಟಿಲುಗಳು ಪಾಚಿಯಿಂದ ಕೂಡಿದ್ದು, ನೀರಿನ ಹರಿವಿಗೆ ಅಲ್ಲಲ್ಲಿ ಕಲ್ಲುಗಳು ಕೊಚ್ಚಿಹೋಗಿದ್ದು, ನೀರು ಹೆಚ್ಚು ಹರಿವು ಇದ್ದಾಗ ಭಕ್ತಾಧಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದರಿಂದ ಮೆಟ್ಟಿಲುಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಕಾಮಗಾರಿ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೫೪ (೧೧೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಕಾರವಾರ ಜಿಲ್ಲೆಯಲ್ಲಿ ಎಷ್ಟು ಕಿ.ಮೀ. ರಸ್ತೆಗಳನ್ನು ನಿರ್ಮಿಸಲಾಗಿದೆ :

(ಆ) ಆ ಪೈಕಿ ಜನ ವಸತಿ ಪ್ರದೇಶಗಳಿಗೆ ರಾಜ್ಯ ಸರ್ಕಾರ ಸರ್ವ ಋತು ಗ್ರಾಮೀಣ ರಸ್ತೆ ಸಂಪರ್ಕ ಕಲ್ಪಿಸಲಾಗಿದೆಯೇ ;

(ಇ) ಈ ಯೋಜನೆಯಡಿ ಕಾರವಾರ ಜಿಲ್ಲೆಯ ಎಷ್ಟು ಹಳ್ಳಿಗಳಿಗೆ ರಸ್ತೆಗಳ ಅಭಿವೃದ್ಧಿಯನ್ನು ಮಾಡಲಾಗಿದೆ (ತಾಲ್ಲೂಕುವಾರು ಮಾಹಿತಿ ನೀಡುವುದು) ?

## ಶಿಶು ಅಭಿವೃದ್ಧಿ ಯೋಜನೆ ಎಂ.ಎಸ್.ಪಿ.ಟಿ.ಸಿ. (M.S.P.T.C.) ಸಂಸ್ಥೆಯಿಂದ ಅವ್ಯವಹಾರ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೫೫ (೧೧೯೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯ ಕಳೆದ ೨ ವರ್ಷಗಳಿಂದ ಶಿಶು ಅಭಿವೃದ್ಧಿ ಅಧಿಕಾರಿಗಳು ತಮ್ಮ ಅಧೀನದಲ್ಲಿರುವ ಎಂ.ಎಸ್.ಪಿ.ಟಿ.ಸಿ. (ಸಂಸ್ಥೆ)ಗಳಿಗೆ ಆಹಾರ ಪೂರೈಕೆ ಮಾಡಲು ನೀಡಿದ ಬೇಡಿಕೆ ಪತ್ರ ಹಾಗೂ ಇದಕ್ಕೆ ಎಂ.ಎಸ್.ಪಿ.ಟಿ.ಸಿ. (ಸಂಸ್ಥೆ) ಆಹಾರ ಪೂರೈಕೆ ಮಾಡಿದ ವಿವರ ಹಾಗೂ ಪ್ರತಿ ತಾಲ್ಲೂಕಿನ ಅಂಗನವಾಡಿಗಳಿಗೆ ಶಿಶುಅಭಿವೃದ್ಧಿ ಅಧಿಕಾರಿಗಳಿಂದ ಆಹಾರ ಪೂರೈಕೆಯಾದ ವಿವರ ನೀಡುವುದು (ತಾಲ್ಲೂಕುವಾರು, ತಿಂಗಳವಾರು, ವಿವರ ನೀಡುವುದು) ;

(ಆ) ಸದರಿ ಎಂ.ಎಸ್.ಪಿ.ಟಿ.ಸಿ. (ಸಂಸ್ಥೆ)ಯಲ್ಲಿ ಪ್ರತಿ ದಿವಸ ಆಹಾರ ಪೂರೈಕೆ ಮಾಡಿದ ಹಾಗೂ ಇತರೆ ಹಣಕಾಸಿನ ಚಟುವಟಿಕೆ ಮುಂತಾದವುಗಳ ಕುರಿತಾದ ಇಡಬೇಕಾದ ವಹಿ ಇಟ್ಟಿರುತ್ತಾರೆಯೇ; ವಿವರ ನೀಡುವುದು (ಕ್ಯಾಶ್ ಬುಕ್, ಸ್ಟಾಕ್ ರಿಜಿಸ್ಟರ್, ಬ್ಯಾಂಕ್ ಬುಕ್, ಫುಡ್ ರಿಸೀವ್ಡ್ ರಿಸಿಪ್ಟ್‌ನ ವಿವರ ತಿಂಗಳವಾರು ಅಧಿಕಾರಿಗಳ ಷರಾ ಸಮೇತ ನೀಡುವುದು) ;

(ಇ) ಸದರಿ ಎಂ.ಎಸ್.ಪಿ.ಟಿ.ಸಿ. (ಸಂಸ್ಥೆ) ಹಣಕಾಸು ವ್ಯವಹಾರ ಮಾಡಿದ ಬಗ್ಗೆ ನಿಯಮದಂತೆ ವೃತ್ತಿ ತೆರಿಗೆ ಪಾವತಿ ಮಾಡಿರುತ್ತಾರೆಯೇ; ಮಾಡಿದ್ದರೆ, ತಾಲ್ಲೂಕುವಾರು ಮಾಹಿತಿ ನೀಡುವುದು ; ಈಗಾಗಲೇ ಕೆಲವೊಂದು ತಾಲ್ಲೂಕಿನಲ್ಲಿ ಸದರಿ ಸಂಸ್ಥೆಯ ಸದಸ್ಯರುಗಳ ಅವಧಿ ಮುಗಿದಿರುತ್ತದೆಂದು ತಿಳಿದು ಬಂದಿದ್ದು, ಅವರು ಸದಸ್ಯರಾಗಿ ಮುಂದುವರೆಯಲು ಬೈಲಾದಲ್ಲಿ ಅವಕಾಶವಿದೆಯೇ ; ಇದ್ದರೆ, ಎಷ್ಟು ವರ್ಷ ಅವರು ಸದಸ್ಯರಾಗಿ ಇರಬಹುದು (ವಿವರ ನೀಡುವುದು) ; ಪ್ರತಿ ತಾಲ್ಲೂಕಿನ ಹಾಲಿ ಇರುವ ಸದಸ್ಯರು ಯಾವ ವರ್ಷದಿಂದ ಇದ್ದಾರೆ (ವರ್ಷವಾರು ವಿವರ ನೀಡುವುದು) ?

## ಕಾಣೆಯಾದ ಮಹಿಳೆಯರನ್ನು ವೇಶ್ಯಾವಾಟಿಕೆ ದೂಡುತ್ತಿರುವುದು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೯೫೬ (೧೨೦೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿದಿನ ಸರಾಸರಿ ಹದಿನೈದು ಮಹಿಳೆಯರು ಕಾಣೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಆಗುತ್ತಿರುವುದಕ್ಕೆ ಬಡತನ ಹಾಗೂ ನಿರುದ್ಯೋಗ ಕಾರಣವೇ ; ಹಾಗೂ ಹದಿನಾರರಿಂದ ಇಪ್ಪತ್ತೆರಡು ವಯಸ್ಸಿನ ಹೆಣ್ಣು ಮಕ್ಕಳು ಕಾಣೆ ಆಗುತ್ತಿರುವ ಸಂಗತಿ ನಿಜವೇ ;

(ಇ) ಹಾಗಿದ್ದಲ್ಲಿ, ಮಹಿಳೆಯರ ನಾಪತ್ತೆ ತಡೆಯುವುದಕ್ಕೆ ಆಗುವುದಿಲ್ಲವೇ ;

(ಈ) ಮಹಿಳೆಯರು ಕಾಣೆಯಾಗುವುದನ್ನು ತಡೆಯಲು ಮಹಿಳಾ ಆಯೋಗ ಯಾವ ಕ್ರಮ ಕೈಗೊಂಡಿದೆ ;

(ಉ) ಹೆಣ್ಣು ಮಕ್ಕಳನ್ನು ಅಪಹರಿಸಿಕೊಂಡು ಹೋಗಿ ಹಣಕ್ಕೋಸ್ಕರ ಮಾರಾಟ ಮಾಡಿ ವೇಶ್ಯಾವೃತ್ತಿಗೆ ಹಚ್ಚುವುದನ್ನು ತಡೆಯಲು ಕ್ರಮ ಕೈಗೊಳ್ಳಲಾಗುವುದೇ ; ಬೆಳಗಾವಿ ಜಿಲ್ಲೆಯಲ್ಲಿ ಹೆಣ್ಣು ಮಕ್ಕಳನ್ನು ಹೆಚ್ಚು ಅಪಹರಿಸಿಕೊಂಡು ಹೋಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ರಾಜ್ಯದ ಹೆಣ್ಣು ಮಕ್ಕಳು ಮಹಾರಾಷ್ಟ್ರದಲ್ಲಿ ವೇಶ್ಯಾವಾಟಿಕೆಯಲ್ಲಿ ತೊಡಗಿರುವುದನ್ನು ತಪ್ಪಿಸಲು ಯಾವ ಕ್ರಮ ಕೈಕೊಳ್ಳಲಾಗುವುದು ?

## ನೂತನ ರೈಲು ಮಾರ್ಗ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೯೫೭ (೧೨೦೨) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಿತ್ತೂರು, ಬೈಲಹೊಂಗಲ, ಸೊಗಲ, ವಯಾ ಯಲ್ಲಮ್ಮನಗುಡ್ಡ, ಧಾರವಾಡ ರೈಲ್ವೆ ಸರ್ವೇ ಕೆಲಸ ಮುಗಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈಗ ಸದ್ಯ ಬೆಳಗಾವಿ–ಧಾರವಾಡ ಎಷ್ಟು ಕಿ.ಮೀ. ರೈಲ್ವೆ ಲೈನ್ ಅಂತರ ಇರುವುದು ; ಇನ್ನು ಮುಂದೆ ಕಿತ್ತೂರು ವಯಾ ಯಲ್ಲಮ್ಮಗುಡ್ಡ ಧಾರವಾಡ ಮುಖಾಂತರ ರೈಲು ಮಾರ್ಗ ಕಲ್ಪಿಸಿದಲ್ಲಿ ಎಷ್ಟು ಕಿ.ಮೀ. ಆಗುವುದು ;

03375-5

(ಇ) ಈ ಮಾರ್ಗದ ಸರ್ವೇ ರಿಪೋರ್ಟ್ ಸಲ್ಲಿಸಿದ್ದರೂ ಕೂಡ ಇನ್ನೂವರೆಗೂ ರಾಜ್ಯ ಸರ್ಕಾರ ಕೇಂದ್ರದ ಮೇಲೆ ಒತ್ತಾಯ ಹೇರದ ಹಿನ್ನೆಲೆಯಲ್ಲಿ ಈ ಕೆಲಸ ವಿಳಂಬವಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕೂಡಲೇ ಈ ಕೆಲಸ ಪ್ರಾರಂಭಿಸುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಾಯ ತರಲಾಗುವುದೇ ?

## ಅಂಗವಿಕಲರ ಅನುದಾನಿತ ಶಾಲೆಗಳ ನೌಕರರಿಗೆ ವೇತನ ಸೌಲಭ್ಯ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೯೫೮ (೧೨೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಕಲಚೇತನ ಹಾಗೂ ಹಿರಿಯ ನಾಗರೀಕರ (ಅಂಗವಿಕಲ ಅನುದಾನಿತ ಶಾಲೆಗಳ ನೌಕರರಿಗೆ) ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿನ ಸಿಬ್ಬಂದಿ ವರ್ಗಕ್ಕೂ ಮಾನವ ಸಂಪನ್ಮೂಲ ಯೋಜನೆ (ಹೆಚ್.ಆರ್.ಎಂ.ಎಸ್.) ಕಡ್ಡಾಯವಾಗಿ ಅಳವಡಿಸುವಂತೆ ಸರ್ಕಾರದವರು ಸಿ.ಆ.ಸು.ಇ ೨ ಯೋಜನೆ ೨೦೧೩(೧) ದಿನಾಂಕ: ೩೦-೦೪-೨೦೧೩ ರಂದು ಆದೇಶ ಹೊರಡಿಸಿರುವುದು ನಿಜವೇ ;

(ಆ) ಸರ್ಕಾರದ ಈ ಆದೇಶ ಜಾರಿಗೆ ಬಂದಿರುವುದಿಲ್ಲ ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಆದೇಶ ಕೂಡಲೇ ಜಾರಿಗೆ ತರಲಾಗುವುದೇ ;

(ಈ) ಸರ್ಕಾರವು ಈಗಾಗಲೇ ತನ್ನ ನೌಕರರಿಗೆ ನೀಡುತ್ತಿರುವ ಎಲ್ಲ ವೇತನ ಸೌಲಭ್ಯಗಳನ್ನು ಖಾಸಗಿ ಅನುದಾನಿತ ಶಾಲಾ ಸಿಬ್ಬಂದಿ ವರ್ಗಕ್ಕೆ ವಿಸ್ತರಿಸುವ ಸಂಗತಿ ನಿಜವೇ ;

(ಉ) ಸನ್ ೧೯೮೨ರ ರಾಜ್ಯ ಅನುದಾನಿತ ವಿಶೇಷ ಶಾಲೆಗಳ ಅನುದಾನ ಸಂಹಿತೆಯಡಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿ ವರ್ಗದವರನ್ನು ಆದಷ್ಟು ಬೇಗನೇ ಹೆಚ್.ಆರ್.ಎಂ.ಎಸ್. ನಲ್ಲಿ ಅಳವಡಿಸಿ ಪ್ರತಿ ತಿಂಗಳು ವೇತನವನ್ನು ಬಿಡುಗಡೆ ಮಾಡಿ ಸಿಬ್ಬಂದಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ಕ್ರಮ ಕೈಕೊಳ್ಳಲಾಗುವುದೇ ;

(ಊ) ರಾಜ್ಯದಲ್ಲಿ ಸನ್ ೧೯೮೨ರ ಅಡಿಯಲ್ಲಿ ಅನುದಾನ ಸಂಹಿತೆಯಡಿ ನಡೆಸುತ್ತಿರುವ ಅತಿ ವಿಶೇಷ ಶಾಲೆಗಳು ಹಾಗೂ ತರಬೇತಿ ಕೇಂದ್ರಗಳು ಎಷ್ಟು ; ಪ್ರತಿಯೊಂದು ಶಾಲೆಯಲ್ಲಿ ಎಷ್ಟು ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ (ಹೆಸರು, ವಿಳಾಸಪೂರ್ಣ ವಿವರ ಒದಗಿಸುವುದು) ?

## ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮೂಲಭೂತ ಸೌಕರ್ಯಗಳ ಕೊರತೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೯೫೯ (೧೧೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಎಂದಿನಿಂದ ಪ್ರಾರಂಭವಾಯಿತು ;

(ಆ) ಈ ಕಾಲೇಜಿನಲ್ಲಿ ಎಷ್ಟು ವಿದ್ಯಾರ್ಥಿಗಳು ಈ ವರ್ಷ ಪ್ರವೇಶ ಪಡೆದಿರುವರು (ವಿವರ ಒದಗಿಸುವುದು) ;

(ಇ) ಈ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಶಿಕ್ಷಕರ ಹಾಗೂ ಕೊಠಡಿಗಳ ಕೊರತೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸುಮಾರು ಆರನೂರು ವಿದ್ಯಾರ್ಥಿಗಳು ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದರೂ ಕೇವಲ ಒಬ್ಬರೇ ಇಂಗ್ಲೀಷ್ ಹಾಗೂ ಕನ್ನಡ ಉಪನ್ಯಾಸಕರು ಇರುವುದು ಸರ್ಕಾರದ ಗಮನದಲ್ಲಿದೆಯೇ ;

(ಉ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಉಪನ್ಯಾಸಕರನ್ನು ನೇಮಿಸಲು ಕ್ರಮ ಕೈಗೊಳ್ಳಲಾಗುವುದೇ ; ಎಷ್ಟು ಜನ ಉಪನ್ಯಾಸಕರ ಅವಶ್ಯಕತೆ ಇರುವುದು (ವಿವರ ನೀಡುವುದು) ;

(ಊ) ಈ ಕಾಲೇಜಿನಲ್ಲಿ ಇಲ್ಲಿಯವರೆಗೂ ಲೈಬ್ರರಿ, ಸೈನ್ಸ್ ಹಾಲ್‌ಗಳು, ಸ್ಟಾಫ್ ರೂಮ್ ಕೊಠಡಿ ಹಾಗೂ ಲೇಡಿಸ್ ರೂಮ್, ಬೋಧನಾ ಕೊಠಡಿಗಳು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನ ದಲ್ಲಿದೆಯೇ ; ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಅನುಕೂಲತೆಗಾಗಿ ಎಷ್ಟು ದಿನಗಳೊಳಗಾಗಿ ಈ ಕೆಲಸವನ್ನು ಮಾಡಲಾಗುವುದು ; ಈ ಜಾಗವು ಅತಿಕ್ರಮಣವಾಗುತ್ತಿದ್ದು, ಅದನ್ನು ತಪ್ಪಿಸಲು ಕಾಂಪೌಂಡ್ ಗೋಡೆ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ ;

(ಋ) ಈ ಕಾಲೇಜಿನಲ್ಲಿ ಬೋಧಕ ಹಾಗೂ ಬೋಧಕೇತರ ಮತ್ತು ವಿದ್ಯಾರ್ಥಿಗಳಿಗೆ ಮೂತ್ರಾಲಯ-ಶೌಚಾಲಯಗಳನ್ನು ತ್ವರಿತವಾಗಿ ಕಟ್ಟಡ ಕ್ರಮ ಕೈಗೊಳ್ಳಲಾಗುವುದೇ ; ಎಷ್ಟು ದಿನಗಳೊಳಗಾಗಿ ಕಟ್ಟಲಾಗುವುದು ?

# ಶ್ರೀ ಹಾನಗಲ್ ಕುಮಾರಸ್ವಾಮಿಗಳ ಸಮಗ್ರ ಕೃತಿ ಮುದ್ರಣಕ್ಕಾಗಿ ಆಯವ್ಯಯದಲ್ಲಿ ಸೇರಿಚ ಹಣವನ್ನು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೯೬೦ (೧೨೦೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶ್ರೀ ಹಾನಗಲ್ ಕುಮಾರ ಸ್ವಾಮಿಗಳ ಸಮಗ್ರ ಕೃತಿ ಹಾಗೂ ತಾಳೆಎಲೆ ಮೇಲೆ ಬರೆದ ಸಮಗ್ರ ವಚನಗಳನ್ನು ಪ್ರಿಂಟ್ ಮಾಡಿಸಲು ೨೦೧೨–೧೩ನೇ ಆಯವ್ಯಯದಲ್ಲಿ ಸೇರಿಸಲು ಆದೇಶ ಮಾಡಿದ ಸಂಗತಿ ನಿಜವೇ

(ಆ) ೨೦೧೨–೧೩ನೇ ಸಾಲಿನ ಆಯವ್ಯಯದಲ್ಲಿ ಈ ಕೆಲಸಕ್ಕೆ ಮೂವತ್ತು ಲಕ್ಷ ರೂ. ಅನುದಾನ ಒದಗಿಸಿದ ಸಂಗತಿ ನಿಜವೇ ;

(ಇ) ಹಾಗಿದ್ದಲ್ಲಿ, ಈ ಅನುದಾನವನ್ನು ಜಿಲ್ಲಾಧಿಕಾರಿಗಳು ಬಾಗಲಕೋಟೆ ಇವರಿಗೆ ಬಿಡುಗಡೆ ಮಾಡಲು ವಿನಂತಿಸಿಕೊಂಡ ಸಂಗತಿ ನಿಜವೇ ಎಂದು ವಿನಂತಿಸಿಕೊಳ್ಳಲಾಗಿದೆ ;

(ಈ) ಶ್ರೀಮದ್ವೀರಶೈವ ಶಿವಯೋಗಮಂದಿರ ಸಂಸ್ಥೆಯವರು ಪುಸ್ತಕಗಳನ್ನು ಪ್ರಿಂಟ್ ಮಾಡಿಸಲಾಗುವ ಎಸ್ಟಿಮೇಟನ್ನು ನಿರ್ದೇಶಕರಿಗೆ ಕಳುಹಿಸಿದ ಸಂಗತಿ ನಿಜವೇ ; ಹಾಗೂ ಎಂದು ಕಳುಹಿಸಲಾಗಿದೆ ;

(ಉ) ಆಗಿನ ಮುಖ್ಯಮಂತ್ರಿಗಳು Action Plan ದಲ್ಲಿ ಒದಗಿಸಲಾದ ಅನುದಾನವನ್ನು ಬಿಡುಗಡೆ ಮಾಡಲು ಇಲಾಖೆಗೆ ಆದೇಶ ನೀಡಿದ ಸಂಗತಿ ನಿಜವೇ ; ಹಾಗಿದ್ದಲ್ಲಿ, ಎಂದು ಆದೇಶ ಮಾಡಲಾಗಿದೆ ;

(ಊ) ಈ ಆದೇಶದ ಪ್ರಕಾರ ಹಣ ಬಿಡುಗಡೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ; ವಿವರ ನೀಡುವುದು ;

(ಋ) ೨೦೧೩-೧೪ನೇ ಸಾಲಿನ ಆಯವ್ಯಯದಲ್ಲಿ Though Over Sight (ನದರಚೂಕಿನಿಂದ) ಆಗಿ ಬಿಟ್ಟು ಹೋದ ಸಂಗತಿ ನಿಜವೇ ;

(ೠ) ಹಾಗಿದ್ದಲ್ಲಿ, ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಗ್ರಂಥಾಲಯ ನಿರ್ವಹಣೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೬೧ (೧೨೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಜಿಲ್ಲಾ, ತಾಲ್ಲೂಕು ಮತ್ತು ಸಂಚಾರಿ ಗ್ರಂಥಾಲಯಗಳೆಷ್ಟು (ಶಾಖೆಗಳು ಸೇರಿ) ;

(ಆ) ರಾಜ್ಯದ ಗ್ರಂಥಾಲಯಗಳಿಗೆ ಕಳೆದ ೨ ವರ್ಷಗಳಿಂದ ಖರ್ಚು ಮಾಡಿರುವ ಮೊಬಲಗೆಷ್ಟು ;

(ಇ) ಸಾರ್ವಜನಿಕ ಜಿಲ್ಲಾ, ತಾಲ್ಲೂಕು ಮತ್ತು ಸಂಚಾರಿ ಗ್ರಂಥಾಲಯಗಳಿಗೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು ; ಇವುಗಳ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು ; ಇವುಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಈ) ಕಳೆದ ಎರಡು ವರ್ಷಗಳಿಂದ ಬಿ.ಬಿ.ಎಂ.ಪಿ. ಸಂಗ್ರಹಿಸಿರುವ ಗ್ರಂಥಾಲಯ ತೆರಿಗೆ ಎಷ್ಟು ; ಈ ಪೈಕಿ ಗ್ರಂಥಾಲಯ ಇಲಾಖೆಗೆ ನೀಡಿರುವುದೆಷ್ಟು ;

(ಉ) ಬಿ.ಬಿ.ಎಂ.ಪಿ. ಸಂಗ್ರಹಿಸುವ ಗ್ರಂಥಾಲಯ ತೆರಿಗೆಯನ್ನು ನೇರವಾಗಿ ಆ ಇಲಾಖೆಯ ಬ್ಯಾಂಕ್ ಖಾತೆಗೆ ಹೋಗುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಂಜೆ ಇಂಜನೀಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾರಂಭ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೬೨ (೧೨೦೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ನಗರದಲ್ಲಿ ಸರ್ಕಾರಿ ಇಂಜನೀಯರಿಂಗ್ ಕಾಲೇಜಿನಲ್ಲಿ ಸಂಜೆ ಇಂಜನಿಯರಿಂಗ್ ಕಾಲೇಜು ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಎಲ್.ವಿ. ಪಾಲಿಟೆಕ್ನಿಕ್ ಮತ್ತು ಮಹಿಳಾ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸಂಜೆ ಪಾಲಿಟೆಕ್ನಿಕ್ ಕಾಲೇಜುಗಳನ್ನು ನೂತನವಾಗಿ ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು ?

## ಅಂಗನವಾಡಿ ಮಕ್ಕಳಿಗೆ ಪೌಷ್ಠಿಕ ಆಹಾರ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೯೬೩ (೧೨೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಅಂಗನವಾಡಿ ಮಕ್ಕಳು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಯಾವ ರೀತಿಯ ಪೌಷ್ಠಿಕ ಆಹಾರ ನೀಡಲಾಗುತ್ತಿದೆ ;

(ಆ) ಸದರಿ ಆಹಾರ ಪೂರೈಕೆಗೆ ರಾಜ್ಯದಲ್ಲಿ ತಿಂಗಳಿಗೆ ಸರಾಸರಿ ಒಟ್ಟು ಎಷ್ಟು ಹಣ ಖರ್ಚಾಗುತ್ತಿದೆ ; ಇದರ ಪೂರೈಕೆಯ ವಿವರ ತಿಳಿಸುವುದು ;

(ಇ) ಇತ್ತೀಚೆಗೆ ನೀಡುತ್ತಿರುವ ಸದರಿ ಆಹಾರವು ಕಳಪೆ ಗುಣಮಟ್ಟದ್ದಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ;

(ಈ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಸಿ.ಬಿ.ಎಸ್.ಸಿ ಪಠ್ಯ ಕ್ರಮದಲ್ಲಿನ ಲೋಪಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೯೬೪ (೧೨೦೬) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನ ಸಿ.ಬಿ.ಎಸ್.ಇ., ಪಠ್ಯಕ್ರಮ ಆಧಾರಿತ ಎಸ್.ಎಸ್.ಎಲ್.ಸಿ.. ಗಣಿತ ಪಠ್ಯಪುಸ್ತಕದಲ್ಲಿ ತಪ್ಪುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಪ್ಪುಗಳ ವಿವರ ನೀಡುವುದು ;

(ಇ) ಹೊಸ ಪಠ್ಯಕ್ರಮವಾಗಿರುವ ಈ ಪುಸ್ತಕದಲ್ಲಿನ ತಪ್ಪುಗಳು ಶಿಕ್ಷಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಗೊಂದಲವನ್ನು ತರುವುದಿಲ್ಲವೇ ;

(ಈ) ತಪ್ಪುಗಳನ್ನು ಪಟ್ಟಿ ಮಾಡಿ, ಸರಿಪಡಿಸಿದ ವಿವರವನ್ನು ಪಠ್ಯ ಪುಸ್ತಕ ಪರಿಷ್ಕರಣಾ ಸಮಿತಿಯಿಂದ ಎಲ್ಲ ಶಾಲೆಗಳಿಗೆ ಕಳಿಸುವ ವ್ಯವಸ್ಥೆಯನ್ನು ಸರ್ಕಾರ ಮಾಡಬಹುದೇ ?

## ಕನ್ನಡ ಚಿತ್ರರಂಗದಲ್ಲಿ ಪರಭಾಷಾ ಡಬ್ಬಿಂಗ್ ವಿರೋಧ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೯೬೫ (೧೨೨೯) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) "ಕನ್ನಡ ಚಿತ್ರರಂಗಕ್ಕೆ ಡಬ್ಬಿಂಗ್ ಸಂಸ್ಕೃತಿ ಬೇಡ, ಪರಭಾಷಾ ಚಿತ್ರಗಳ ಹಾವಳಿಯಿಂದ ಕನ್ನಡ ಚಿತ್ರರಂಗವನ್ನು ಉಳಿಸಿ" ಎಂದು ಇಡೀ ಕನ್ನಡ ಚಿತ್ರರಂಗ ಹೋರಾಟ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕನ್ನಡ ಚಿತ್ರರಂಗವನ್ನು ಪರಭಾಷಾ ಚಿತ್ರಗಳ ಹಾವಳಿಯಿಂದ, ಡಬ್ಬಿಂಗ್ ಸಂಸ್ಕೃತಿಯಿಂದ ರಕ್ಷಿಸುವಲ್ಲಿ ಸರ್ಕಾರದ ನಿಲುವುಗಳೇನು?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ಗಳ ಅಭಿವೃದ್ಧಿ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೬ (೧೨೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣಾಭಿವೃದ್ಧಿಗಾಗಿ ರಾಜ್ಯದ ಜಿಲ್ಲಾ ಪಂಚಾಯ್ತಿಗಳ ಅಭಿವೃದ್ಧಿ ಕಾಮಗಾರಿ ಅನುಷ್ಠಾನಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರ ನೀಡುತ್ತಿರುವ ಮೊತ್ತವೆಷ್ಟು; ಜಿಲ್ಲಾ ಪಂಚಾಯ್ತಿವಾರು ಎರಡು ವರ್ಷದ ಮಾಹಿತಿಯ ವಿವರ ಒದಗಿಸುವುದು;

(ಆ) ೨೦೧೩-೧೪ರಲ್ಲಿ ಮಂಜೂರಾತಿಯಾಗಿದ್ದೆಷ್ಟು; ೨೦೧೪-೧೫ಕ್ಕೆ ನಿಗಧಿಪಡಿಸಿರುವ ಮೊತ್ತವೆಷ್ಟು; ಈ ಮೊತ್ತವನ್ನು ಯಾವ ಕಾಮಗಾರಿಗಳಿಗೆ ಉಪಯೋಗಿಸಬಹುದಾಗಿರುತ್ತದೆ ;

(ಇ) ಇದಲ್ಲದೇ ಯೋಜನೇತರ ವೆಚ್ಚಕ್ಕೆ ನಿಗದಿಪಡಿಸಿರುವ ಮೊತ್ತವೆಷ್ಟು; ಯೋಜನೇತರಡಿಯಲ್ಲಿ ಸೇರ್ಪಡೆಯಾಗುವ ಕೆಲಸಗಳು ಯಾವುವು ;

(ಈ) ಸದರಿ ಹಣವನ್ನು ಪೂರ್ಣವಾಗಿ ಉಪಯೋಗಿಸಿಕೊಂಡಂತಹ ಜಿಲ್ಲಾ ಪಂಚಾಯತ್‌ಗಳಾವುವು; ಇನ್ನು ಈ ಹಣವನ್ನು ಬಳಕೆ ಮಾಡಿಕೊಳ್ಳದಿರುವ ಜಿಲ್ಲಾ ಪಂಚಾಯತ್‌ಗಳ ವಿವರಗಳೇನು; ಹಾಗೆಯೇ ಕಾರಣಗಳೇನು ಎಂಬುದರ ಸಹಿತ ಮಾಹಿತಿ ಒದಗಿಸುವುದು;

(ಉ) ಪಂಚಾಯಿತಿಗಳ ಸಂಪೂರ್ಣ ಅಭಿವೃದ್ಧಿ ಹಾಗೂ ಸ್ವಾವಲಂಬಿಯಾಗಿಸಲು ಕೈಗೊಂಡ ಕ್ರಮಗಳೇನು; ಸದರಿ ಜಿಲ್ಲಾ ಪಂಚಾಯತ್‌ಗಳಿಂದ ಸರ್ಕಾರಕ್ಕೆ ಬರುವಂತಹ ಆದಾಯದ ಮೂಲ ಯಾವುದು (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು) ?

## ಗ್ರಾಮಾಂತರ ಪ್ರದೇಶದಲ್ಲಿ ಕುಡಿಯುವ ನೀರಿನ ತೊಂದರೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೬೭ (೧೨೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದರ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಅಗ್ಗದ (ಕಡಿಮೆ) ದರದಲ್ಲಿ ಶುದ್ಧ ಕುಡಿಯುವ ನೀರಿನ ಯೋಜನೆ ಜಾರಿಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ;

(ಈ) ಇದಕ್ಕಾಗಿ ರಾಜ್ಯದ ಯಾವ ಯಾವ ಜಿಲ್ಲೆಗಳ ಎಷ್ಟು ಗ್ರಾಮಗಳನ್ನು ಗುರುತಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು);

(ಉ) ಇಂತಹ ಮಹತ್ವಾಕಾಂಕ್ಷೆ ಯೋಜನೆಯನ್ನು ರಾಜ್ಯ ಸರ್ಕಾರದ ವತಿಯಿಂದಲೇ ತುರ್ತಾಗಿ ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಇದಕ್ಕೆ ತಗಲುವ ವೆಚ್ಚವೆಷ್ಟು; ಪ್ರಸಕ್ತ ಆಯವ್ಯಯದಲ್ಲಿ ಉದ್ದೇಶಕ್ಕಾಗಿ ಎಷ್ಟು ಹಣ ನಿಗದಿಪಡಿಸಲಾಗುವುದು? (ವಿವರ ನೀಡುವುದು)

## ಖಾಸಗಿ ಹಾಗೂ ಡೀಮ್ಡ್ ವಿಶ್ವವಿದ್ಯಾಲಯಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೯೩೮ (೧೨೧೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಖಾಸಗಿ ಹಾಗೂ ಡೀಮ್ಡ್ ವಿಶ್ವ ವಿದ್ಯಾಲಯಗಳೆಷ್ಟು (ಜಿಲ್ಲಾವಾರು ಪೂರ್ಣ ವಿವರ ಒದಗಿಸುವುದು) ;

(ಆ) ಖಾಸಗಿ ವಿಶ್ವವಿದ್ಯಾಲಯಗಳ ಸ್ಥಾಪನೆಗೆ ಅನುಸರಿಸಿರುವ ಮಾನದಂಡಗಳೇನು;

(ಇ) ಖಾಸಗಿ ವಿಶ್ವವಿದ್ಯಾಲಯಗಳ ಅನರ್ಹತೆ ಬಗ್ಗೆ ತನಿಖೆ ಮಾಡಿ ನಿರ್ಧಾರ ಪರಿಗಣಿಸಲಾಗುವುದೇ, ಹೇಗೆ ;

(ಈ) ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳ ಕುಲಸಚಿವರ ನೇಮಕವನ್ನು ಪಾರದರ್ಶಕಗೊಳಿಸಲು ಸರ್ಕಾರ ಮುಂದಾಗಿದೆಯೇ ;

(ಉ) ಹಾಲಿ ಇರುವ ಕುಲಸಚಿವರುಗಳನ್ನು ಬದಲಾವಣೆಗೊಳಿಸಿ ಹೊಸ ಕುಲಸಚಿವರ ಪಟ್ಟಿಯನ್ನು ಸರ್ಕಾರ ವಿಶ್ವವಿದ್ಯಾಲಯಗಳಿಂದ ಪಡೆದಿದೆಯೇ ;

(ಊ) ಯಾವಾಗ ಹೊಸ ಕುಲಸಚಿವರುಗಳನ್ನು ನೇಮಕಾತಿ ಗೊಳಿಸಲಾಗುತ್ತದೆ; ಇದಕ್ಕೆ ಅನುಸರಿಸುವ ಮಾನದಂಡಗಳಾವುವು (ವಿವರ ನೀಡುವುದು) ?

## ಸುವರ್ಣ ಗ್ರಾಮಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬೯ (೧೨೧೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೦ ರಿಂದ ೨೦೧೪ ರವರೆಗೆ "ಸುವರ್ಣ ಗ್ರಾಮ" ಯೋಜನೆಗೆ ಒಳಪಡುವ ರಾಜ್ಯದ ಒಟ್ಟು ಗ್ರಾಮಗಳ ಸಂಖ್ಯೆ ಎಷ್ಟು;

(ಆ) ಮಂಡ್ಯ ಜಿಲ್ಲೆ/ತಾಲ್ಲೂಕು ದುದ್ದ ಹೋಬಳಿಗೆ ಒಳಪಡುವ ಗ್ರಾಮಗಳ ಸಂಖ್ಯೆ ಎಷ್ಟು ; ಈ ಗ್ರಾಮಗಳ ಪೈಕಿ ಯಾವ ಯಾವ ಗ್ರಾಮಗಳು "ಸುವರ್ಣ ಗ್ರಾಮ"ಕ್ಕೆ ಒಳಗೊಂಡಿವೆ.

(ಇ) ಸುವರ್ಣ ಗ್ರಾಮ ಯೋಜನೆಯಡಿ ದುದ್ದ ಹೋಬಳಿ ಗ್ರಾಮಗಳ ಕಾಮಗಾರಿ ಯಾವ ಹಂತದಲ್ಲಿವೆ; ಎಷ್ಟು ಗ್ರಾಮಗಳ ಕಾಮಗಾರಿ ಮುಗಿದಿದೆ; ಪ್ರತಿಯೊಂದರ ಮೂರು ಹಂತದ ಛಾಯಚಿತ್ರಗಳನ್ನು ನೀಡುವುದು ;

(ಈ) ದುದ್ದ ಹೋಬಳಿಗೆ ಒಳಪಡುವ ಗ್ರಾಮಗಳಿಗೆ ವಿವಿಧ ಯೋಜನೆಯಡಿ ಎಷ್ಟು ಹಣ ಬಿಡುಗಡೆಯಾಗಿದೆ ;

(ಉ) ಮೈಸೂರು ಜಿಲ್ಲೆ, ಹೆಚ್.ಡಿ. ಕೋಟೆ ತಾಲ್ಲೂಕು. ಸರಗೂರು ಹೋಬಳಿಗೆ ಒಳಪಡುವ ಗ್ರಾಮಗಳ ಸಂಖ್ಯೆ ಎಷ್ಟು; ಈ ಗ್ರಾಮಗಳ ಪೈಕಿ ಯಾವ ಯಾವ ಗ್ರಾಮಗಳು "ಸುವರ್ಣ ಗ್ರಾಮ"ಕ್ಕೆ ಒಳಗೊಂಡಿವೆ ?

## ಗ್ರಂಥಾಲಯ ಮತ್ತು ಗ್ರಂಥಪಾಲಕರು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೦ (೧೨೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಮೂಲಭೂತ ಸೌಕರ್ಯಗಳಿಲ್ಲದೇ ಗ್ರಂಥಾಲಯಗಳು ಮುಚ್ಚುವ ಸ್ಥಿತಿ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯಾದ್ಯಂತ ಎಷ್ಟು ಗ್ರಂಥಾಲಯಗಳಿವೆ; ಎಷ್ಟು ಸರ್ಕಾರಿ ಗ್ರಂಥಪಾಲಕರಿದ್ದಾರೆ; (ಉಸ್ತುವಾರಿ ಗ್ರಂಥಪಾಲಕರನ್ನು ಹೊರತುಪಡಿಸಿ)

(ಇ) ಗ್ರಂಥಾಲಯ ಇಲಾಖೆಯಲ್ಲಿ ಎಷ್ಟು ಉಪನಿರ್ದೇಶಕರಿರಬೇಕು; ಹಾಲಿ ಖಾಲಿ ಇರುವ ಉಪನಿರ್ದೇಶಕರ ಸಂಖ್ಯೆ ಎಷ್ಟು;

(ಈ) ಎಷ್ಟು ಗ್ರಂಥಾಲಯಾಧಿಕಾರಿ ಹುದ್ದೆಗಳಿವೆ; ಎಷ್ಟು ಖಾಲಿ ಗ್ರಂಥಾಲಯ ಹುದ್ದೆಗಳಿವೆ; ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು;

(ಉ) ಗ್ರಂಥಪಾಲಕರು ಎಷ್ಟಿರಬೇಕು; ಹಾಲಿ ಇರುವವರ ಸಂಖ್ಯೆ ಎಷ್ಟು;

(ಊ) ಇಲಾಖೆಯಲ್ಲಿ ಖಾಲಿ ಇರುವ ಇತರೆ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಬಹುದು;

(ಋ) ಮೆಟ್ರೋ ಕಾಮಗಾರಿಗಾಗಿ ವಿ.ವಿ.ಪುರಂ ವೃತ್ತದಲ್ಲಿ ಇದ್ದ ಗ್ರಂಥಾಲಯವನ್ನು ತೆರವುಗೊಳಿಸಿದ್ದು, ಪರ್ಯಾಯ ಗ್ರಂಥಾಲಯವನ್ನು ಯಾವಾಗ, ಎಲ್ಲಿ ತೆರೆಯಬಹುದು;

(ಎ) ೨೦೧೩-೧೪ ಹಾಗೂ ೨೦೧೪-೧೫ರಲ್ಲಿ ಗ್ರಂಥಾಲಯ ಇಲಾಖೆಗೆ ಬಿಡುಗಡೆ ಮಾಡಿದ ಹಣವೆಷ್ಟು; ಬಿಡುಗಡೆ ಮಾಡಿದ ಹಣದಲ್ಲಿ ಪುಸ್ತಕ ಖರೀದಿಗಾಗಿ ಖರ್ಚು ಮಾಡಿದ ಹಣವೆಷ್ಟು; ಗ್ರಂಥಾಲಯಕ್ಕಾಗಿ, ಪೀಠೋಪಕರಣಕ್ಕಾಗಿ ಹಾಗೂ ಮೂಲಭೂತ ಸೌಕರ್ಯಗಳಿಗಾಗಿ ಖರ್ಚು ಮಾಡಿದ ಹಣವೆಷ್ಟು; ಪ್ರಸ್ತುತ ಉಳಿದಿರುವ ಹಣವೆಷ್ಟು;

(ಏ) ಬಿ.ಬಿ.ಎಂ.ಪಿ ಯಿಂದ ಗ್ರಂಥಾಲಯ ಇಲಾಖೆಗೆ ಬರಬೇಕಾಗಿರುವ ಹಣವೆಷ್ಟು?

## ಅಂಗನವಾಡಿಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೯೭೧ (೧೨೨೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾವೇರಿ ಜಿಲ್ಲಾ ವ್ಯಾಪ್ತಿಯ ಯಾವ ಯಾವ ಗ್ರಾಮದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ; ಅವುಗಳಲ್ಲಿ

ಸ್ವಂತ ಕಟ್ಟಡದ ಹಾಗೂ ಬಾಡಿಗೆ ಕಟ್ಟಡ ಹೊಂದಿರುವ ಕೇಂದ್ರಗಳು ಯಾವುವು; ತಿಂಗಳ ಬಾಡಿಗೆ ಎಷ್ಟು; (ಗ್ರಾಮಗಳವಾರು, ಕೇಂದ್ರವಾರು, ವಿಧಾನಸಭಾ ಮತಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಅಂಗನವಾಡಿ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಗ್ರಾಮದಲ್ಲಿನ ಯಾವ ಕೇಂದ್ರದ ಕಟ್ಟಡ ಶಿಥಿಲಗೊಂಡಿದೆ; ಶಿಥಿಲಗೊಂಡಿರುವ ಕೇಂದ್ರಗಳ ಸುಧಾರಣೆಗೆ ಕೈಗೊಂಡಿರುವ ಕ್ರಮಗಳೇನು; ಕೈಗೊಳ್ಳದೇ ಇದ್ದಲ್ಲಿ, ಯಾವಾಗ ಕೈಗೊಳ್ಳಲಾಗುವುದು; ಏನಾದರೂ ಅನಾಹುತವಾದಲ್ಲಿ ಅದಕ್ಕೆ ಜವಾಬ್ದಾರರು ಯಾರು;

(ಇ) ೨೦೧೨-೧೩, ೨೦೧೩-೧೪ರ ಅವಧಿಯಲ್ಲಿ ಕೇಂದ್ರಗಳ ದುರಸ್ಥಿಗೆಂದು ಬಿಡುಗಡೆಗೊಂಡಿರುವ ಅನುದಾನವೆಷ್ಟು; ದುರಸ್ಥಿಗೊಳಪಟ್ಟಿರುವ ಕೇಂದ್ರಗಳು ಯಾವುವು; ಯಾವ ಕೇಂದ್ರಕ್ಕೆ ಯಾವ ಕಾಮಗಾರಿಗೆ ಎಷ್ಟು ಮೊತ್ತವನ್ನು ವ್ಯಯಿಸಲಾಗಿದೆ; ಅದು ತೃಪ್ತಿಕರವಾಗಿದೆಯೇ; ಮತ್ತು ಯಾವ ಕೇಂದ್ರಕ್ಕೆ ಒದಗಿಸಿರುವುದಿಲ್ಲ; ಒದಗಿಸದೇ ಇರುವುದಕ್ಕೆ ಕಾರಣವೇನು; (ಗ್ರಾಮಗಳವಾರು, ಕೇಂದ್ರವಾರು, ವಿಧಾನಸಭಾ ಮತಕ್ಷೇತ್ರವಾರು ಮಾಹಿತಿ ನೀಡುವುದು);

(ಈ) ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳ ಕಟ್ಟಡ ದುರಸ್ಥಿಗಾಗಿ ಮತ್ತು ಹೊಸದಾಗಿ ನಿರ್ಮಿಸುವ ಯೋಜನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ೨೦೧೪-೧೫ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಯಾವ ಯಾವ ಕೇಂದ್ರಗಳನ್ನು ಅಳವಡಿಸಲಾಗಿದೆ;

ಯಾವ ಕೇಂದ್ರಕ್ಕೆ ಯಾವ ಕಾಮಗಾರಿಯನ್ನು ಶಿಫಾರಸ್ಸು ಮಾಡಿದೆ; ಅಂದಾಜು ಮೊತ್ತವೆಷ್ಟು (ಗ್ರಾಮಗಳವಾರು, ಕೇಂದ್ರವಾರು, ವಿಧಾನಸಭಾ ಮತಕ್ಷೇತ್ರವಾರು ಮಾಹಿತಿ ನೀಡುವುದು) ?

## ಬೋಧಕ/ಬೋಧಕೇತರರಿಗೆ ವೈದ್ಯಕೀಯ ಭತ್ಯೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೯೭೨ (೧೨೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಂಖ್ಯೆ ಎಷ್ಟು; (ವಿವರಗಳನ್ನು ಒದಗಿಸುವುದು)

(ಇ) ಸದರಿ ಬೋಧಕ/ಬೋಧಕೇತರರಿಗೆ ವೈದ್ಯಕೀಯ ಭತ್ಯೆ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿಯ ಯಾವುದೇ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸದರಿ ಸಿಬ್ಬಂದಿಗಳಿಗೆ ವೈದ್ಯಕೀಯ ಸೌಲಭ್ಯಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಅನುದಾನ ರಹಿತ ಶಾಲಾ/ಕಾಲೇಜುಗಳ ಬೋಧಕ/ಬೋಧಕೇತರ ಸಿಬ್ಬಂದಿಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಣರ ಕ್ಷೇತ್ರ) :-**

೯೭೩ (೧೨೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ಯಾವ ಸಾಲಿನಿಂದ ಯಾವ ಸಾಲಿನವರೆವಿಗೆ ಪ್ರಾರಂಭ ಮಾಡಿರುವ ಅನುದಾನ ರಹಿತ ಪ್ರಾಥಮಿಕ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವೇತನಾನುದಾನ ನೀಡುತ್ತಿದೆ;

(ಆ) ಅನುದಾನ ರಹಿತ ಶಾಲಾ ಕಾಲೇಜುಗಳಲ್ಲಿನ ಬೋಧಕ/ ಬೋಧಕೇತರ ಸಿಬ್ಬಂದಿಗಳು ಸೇವಾ ಭದ್ರತೆ ಮತ್ತು ಆರ್ಥಿಕ ಸೌಲಭ್ಯಗಳ ಕೊರತೆಯಿಂದ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದರೆ, ೨೦೦೦ನೇ ಸಾಲಿನವರೆಗೆ ಪ್ರಾರಂಭವಾಗಿರುವ ಸದರಿ ಶಾಲಾ ಕಾಲೇಜು ಸಿಬ್ಬಂದಿಗಳಿಗೆ ವೇತನಾನುದಾನವನ್ನು ವಿಸ್ತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ಯಾವ ಕಾಲಮಿತಿಯಲ್ಲಿ ೨೦೦೦ನೇ ಸಾಲಿನವರೆವಿಗೆ ಪ್ರಾರಂಭ ಮಾಡಿರುವ ಶಾಲಾಕಾಲೇಜು ಸಿಬ್ಬಂದಿಗಳಿಗೆ ವೇತನಾನುದಾನ ನೀಡಲಾಗುವುದು?

## ಶ್ರೀ ಮಲೆಮಹದೇಶ್ವರ ಬೆಟ್ಟದ ತಪ್ಪಲಿನ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೯೭೪ (೧೨೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ತಾಲ್ಲೂಕಿನ ಶ್ರೀ ಮಲೆಮಹದೇಶ್ವರ ಬೆಟ್ಟದ ತಪ್ಪಲಿನ ಅರಣ್ಯ ಪ್ರದೇಶದಲ್ಲಿ ರಸ್ತೆ ಹಾಗೂ ಸಾರಿಗೆ ಸೌಲಭ್ಯ ಇಲ್ಲದಿರುವ ಎಷ್ಟು ಗ್ರಾಮಗಳಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿವೆ (ಪೂರ್ಣ ವಿವರಗಳೊಡನೆ) ;

(ಆ) ಸದರಿ ಶಾಲೆಗಳಲ್ಲಿ ಎಷ್ಟು ಮಂದಿ ಮಹಿಳಾ ಹಾಗೂ ಪುರುಷ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ (ವಿವರಗಳೊಡನೆ) ;

(ಇ) ಸದರಿ ಶಾಲೆಗಳ ವಿದ್ಯಾರ್ಥಿಗಳಿಗೆ ಸರ್ಕಾರದ ಯೋಜನೆಗಳ ಎಲ್ಲಾ ಸೌಲಭ್ಯಗಳನ್ನು ಸಕಾಲದಲ್ಲಿ ನೀಡಲಾಗುತ್ತಿದೆಯೇ; ಎಲ್ಲಾ ಶಾಲೆಗಳಿಗೂ ಮೂಲಭೂತ ಸೌಲಭ್ಯ ಕಲ್ಪಿಸಲಾಗಿದೆಯೇ;

(ಈ) ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುವ ಬೋಧಕರು ದಿನನಿತ್ಯ ಕಾಡುಪ್ರಾಣಿಗಳ ಹಾವಳಿಯಿಂದ ಹಾಗೂ ವಾಸ್ತವ್ಯದ ಮೂಲಭೂತ ಸೌಲಭ್ಯದ ಕೊರತೆಯಿಂದ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕರ ವಾಸ್ತವ್ಯಕ್ಕೆ ಸವಲತ್ತು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರಗಳೊಡನೆ)

## ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ/ಕಾಲೇಜು ವಿದ್ಯಾರ್ಥಿಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೯೭೫ (೧೨೨೫) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯಪಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನುದಾನ ರಹಿತ ಕನ್ನಡ ಮಾಧ್ಯಮ ಪ್ರಾಥಮಿಕ. ಪ್ರೌಢಶಾಲೆ ಹಾಗೂ ಪದಪಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಮಂದಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ;

(ಇ) ಸದರಿ ಶಾಲಾ ಕಾಲೇಜಿನ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಯಾವುದೇ ಉಚಿತ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಾದರೆ, ಆರ್ಥಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ಸರ್ಕಾರ ಯಾವ ಉಚಿತ ಸೌಲಭ್ಯಗಳನ್ನು ನೀಡಲು ಕ್ರಮ ಕೈಗೊಳ್ಳುತ್ತದೆ ? (ವಿವರಗಳೊಡನೆ)

## ಕರ್ನಾಟಕ ಉನ್ನತ ಶಿಕ್ಷಣ ಪರಿಷತ್

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೯೭೬ (೧೨೨೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ ಎಂದಿನಿಂದ ಅಸ್ತಿತ್ವಕ್ಕೆ ಬಂದಿದೆ;

(ಆ) ಉನ್ನತ ಶಿಕ್ಷಣ ಪರಿಷತ್ತಿನ ಮುಖ್ಯ ಧ್ಯೇಯೋದ್ದೇಶಗಳೇನು ಹಾಗೂ ಕಾರ್ಯಗಳೇನು; (ವಿವರಗಳೊಡನೆ)

(ಇ) ಸದರಿ ಪರಿಷತ್ತಿನಲ್ಲಿ ಎಷ್ಟು ಮಂದಿ ಸದಸ್ಯರಿದ್ದಾರೆ; ಯಾವ ವರ್ಗದ ಸದಸ್ಯರಿದ್ದಾರೆ (ವಿವರಗಳೊಡನೆ) ;

(ಈ) ಇದುವರೆವಿಗೂ ಪರಿಷತ್ತಿನ ಎಷ್ಟು ಸಭೆಗಳನ್ನು ನಡೆಸಲಾಗಿದೆ ;

(ಉ) ಸದರಿ ಸಭೆಗಳಲ್ಲಿ ಯಾವ/ಎಷ್ಟು ವಿಷಯಗಳ ಕುರಿತು ನಿರ್ಣಯಗಳನ್ನು ಕೈಗೊಳ್ಳಲಾಗಿದೆ (ವಿವರಗಳೊಡನೆ) ;

(ಊ) ಇದುವರೆವಿಗೂ ಉನ್ನತ ಶಿಕ್ಷಣ ಪರಿಷತ್ತಿಗೆ ಎಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ (ವರ್ಷವಾರು ವಿವರಗಳೊಡನೆ) ?

## ನೂತನ ವಿಶ್ವವಿದ್ಯಾಲಯದ ಪ್ರಾರಂಭ

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-**

೯೭೭ (೧೨೩೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯೆಷ್ಟು; ಹಾಗೂ ಅದರಿಂದ ಸಂಯೋಜಿತಗೊಂಡಿರುವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಸೇರಿದ ಕಾಲೇಜುಗಳನ್ನು ಬೆಂಗಳೂರು ವಿಶ್ವವಿದ್ಯಾಲಯದಿಂದ ಬೇರ್ಪಡಿಸಿ ಹೊಸ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ?

## ವಸತಿ ಯೋಜನೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :–**

೯೭೮ (೧೨೩೧) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಕಳೆದ ೨ ವರ್ಷಗಳಿಂದ ಬಸವ ವಸತಿ ಯೋಜನೆ, ಅಂಬೇಡ್ಕರ್ ವಸತಿ ಯೋಜನೆ, ವಾಜಪೇಯಿ ನಗರ ವಸತಿ ಯೋಜನೆ ಮತ್ತು ಇಂದಿರಾ ಆವಾಸ್ ಯೋಜನೆಗಳಡಿಯಲ್ಲಿ ನಿರ್ಮಿಸಲಾಗಿರುವ ಮನೆಗಳೆಷ್ಟು ? (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ಶಾಲೆಯನ್ನು ಬಿಟ್ಟ ಮಕ್ಕಳು

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :–**

೯೭೯ (೧೨೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲೆಯನ್ನು ಬಿಟ್ಟ ಮಕ್ಕಳ ಕುರಿತು ಸಮೀಕ್ಷೆ ನಡೆಸಲಾಗಿದೆಯೆ;

(ಆ) ಹಾಗಿದ್ದಲ್ಲಿ ಮಕ್ಕಳನ್ನು ಶಾಲೆಗೆ ಕರೆ ತರುವ ಪ್ರಯತ್ನ ಕುರಿತು ಸರ್ಕಾರ ಕೈಗೊಂಡಿರುವ ಯೋಜನೆಗಳೇನು;

(ಇ) ಇಲ್ಲಿಯವರೆಗೆ ಶಾಲೆಯನ್ನು ಬಿಟ್ಟ ಎಷ್ಟು ಮಕ್ಕಳನ್ನು ಶಾಲೆಗೆ ಪುನಃ ಸೇರಿಸಲಾಗಿದೆ;

(ಈ) ಶಾಲೆಗೆ ಮಕ್ಕಳನ್ನು ಕಳಿಸದ ಪೋಷಕರ ವಿರುದ್ಧ ಕಾನೂನು ಕ್ರಮ ಕೈಕೊಳ್ಳಲಾಗಿದೆಯೇ; ಎಷ್ಟು ಪೋಷಕರ ವಿರುದ್ಧ ಕಾನೂನು ಕ್ರಮ ಕೈಕೊಳ್ಳಲಾಗಿದೆ ?

## ವೇತನಾನುದಾನ ನೀಡುವುದು

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :–**

೯೮೦ (೧೨೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫–೯೬ನೇ ಸಾಲಿನಿಂದ ೨೦೦೦–೨೦೦೧ನೇ ಸಾಲಿನಲ್ಲಿ ಪ್ರಾರಂಭವಾಗಿರುವ ಅನುದಾನರಹಿತ ಕನ್ನಡ ಪ್ರಾಥಮಿಕ ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳೆಷ್ಟು (ವಿವರ ನೀಡುವುದು) ;

(ಆ) ಈ ಶಾಲಾ ಕಾಲೇಜುಗಳಿಗೆ ವೇತನಾನುದಾನ ನೀಡಲು ಸರ್ಕಾರ ಚಿಂತಿಸಿರುವುದೇ ;

(ಇ) ಚಿಂತಿಸಿದ್ದರೆ, ಯಾವ ಕಾಲಮಿತಿಯಲ್ಲಿ ವೇತನಾನುದಾನ ನೀಡಲಾಗುವುದು ;

(ಈ) ಈ ಶಾಲಾ ಕಾಲೇಜುಗಳಿಗೆ ವೇತನಾನುದಾನ ನೀಡಲು ಬೇಕಾಗುವ ಮೊತ್ತವೆಷ್ಟು ?

## ಹೊಸ ಸನದ್‌ಗಳನ್ನು ಮಂಜೂರಾತಿ

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-**

೯೮೧ (೧೨೩೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಿಎಲ್-೨, ಸಿಎಲ್-೯, ಸಿಲ್-೭ ಸನದುದಾರರ ಸಂಖ್ಯೆ ಎಷ್ಟು;

(ಆ) ಹಾಲಿ ಸನದುದಾರರಿಂದ ವಾರ್ಷಿಕವಾಗಿ ವಸೂಲು ಮಾಡುತ್ತಿರುವ ಶುಲ್ಕ ಹಾಗೂ ಮೊತ್ತದ ವಿವರಗಳನ್ನು ನೀಡುವುದು;

(ಇ) ಹೊಸದಾಗಿ ಸಿಲ್-೨ ಸನದ್‌ಗಳನ್ನು ನಿರುದ್ಯೋಗಿ ಪದವೀಧರ ಯುವಕರಿಗೆ ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ;

(ಈ) ಹಾಗಿದ್ದರೆ, ಯಾವ ಸಮಯದಲ್ಲಿ ಹೊಸ ಸನದ್‌ಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆ ?

## ಕೇಂದ್ರ ಸರ್ಕಾರದ ಆರ್.ಎಂ.ಎಸ್.ಎ. ಯೋಜನೆಯ ಜಾರಿ

**ಶ್ರೀ ಗೋ.ಮಧುಸೂದನ್ (ಪದವೀಧರರ ಕ್ಷೇತ್ರ ) :-**

೯೮೨ (೧೨೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರದ ಆರ್.ಎಂ.ಎಸ್.ಎ. ಯೋಜನೆಯಂತೆ ೫+೩+೪ ಯೋಜನೆಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆಯೇ;

(ಆ) ಈ ಯೋಜನೆಯನ್ನು ಜಾರಿಗೊಳಿಸಿದಲ್ಲಿ ಪದವಿ ಪೂರ್ವ ಶಿಕ್ಷಣ ಮಂಡಳಿಯನ್ನು ಪ್ರೌಢ ಶಿಕ್ಷಣ ಇಲಾಖೆಯೊಂದಿಗೆ ವಿಲೀನಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಮುಚ್ಚಿರುವುದು ಇಲ್ಲವೇ ವಿಲೀನಗೊಳಿಸಿರುವುದು

**ಶ್ರೀ ಗೋ.ಮಧುಸೂದನ್ (ಪದವೀಧರರ ಕ್ಷೇತ್ರ ) :-**

೯೮೩ (೧೨೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ಮುಚ್ಚಲಾಗಿದೆ, ಇಲ್ಲವೇ ವಿಲೀನಗೊಳಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿಯಾಗಿ ವಿಲೀನಗೊಳಿಸುವ ಸಂದರ್ಭದಲ್ಲಿ ಯಾವ ಮಾನದಂಡವನ್ನು ಅನುಸರಿಸಲಾಗಿದೆ ; (ಅಂತಹ ಶಾಲೆಗಳ ವಿದ್ಯಾರ್ಥಿಗಳ ಸಂಖ್ಯೆ, ಶಿಕ್ಷಕರ ಸಂಖ್ಯೆ, ಕಟ್ಟಡ ಮುಂತಾದ ವಿವರ ನೀಡುವುದು) ?

## ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೯೮೪ (೧೨೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನ (RMSA) ಎಂದಿನಿಂದ ಜಾರಿಗೊಳಿಸಲಾಗಿದೆ ;

(ಆ) ಈ ಯೋಜನೆಯ ಧ್ಯೇಯೋದ್ದೇಶಗಳೇನು ;

(ಇ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನ (RMSA) ಅನ್ವಯ ೧೦+೨+೩ ಪದ್ಧತಿ ಬದಲಾವಣೆಯಾಗಿ ೫+೩+೪+೩ ಯೋಜನೆ ಅನುಷ್ಠಾನದ ಅನಿವಾರ್ಯತೆ ಸರ್ಕಾರದ ಮುಂದಿದೆಯೇ ;

(ಈ) ಈ ಯೋಜನೆಯ ಅನುಷ್ಠಾನದಿಂದ ಉಂಟಾಗುವ ಆಡಳಿತಾತ್ಮಕ ಸಮಸ್ಯೆಗಳ ಬಗ್ಗೆ ಸರ್ಕಾರದ ನಿಲುವೇನು ;

(ಉ) ಇದರಿಂದ ಉಂಟಾಗುವ ಗೊಂದಲದ ನಿವಾರಣೆಗೆ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## ಜೆ.ಓ.ಸಿ. ಸಿಬ್ಬಂದಿಗಳ ಖಾಯಂಮಾತಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೮೫ (೧೨೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜೆ.ಓ.ಸಿ. ಸಿಬ್ಬಂದಿಗಳನ್ನು ಖಾಯಂ ಮಾಡುವ ಕುರಿತು ಸದನದಲ್ಲಿ ಒಪ್ಪಿಗೆ ಪಡೆದಿರುವ ಮಸೂದೆಯ ಅನುಷ್ಠಾನದಲ್ಲಿ ವಿಳಂಬ ವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನುದಾನಿತ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಜೆ.ಓ.ಸಿ. ಸಿಬ್ಬಂದಿಗಳ ನೇಮಕಾತಿಯಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ;

(ಇ) ಮಸೂದೆ ಮಂಡನೆಯಾಗಿ ಈಗಾಗಲೇ ಎರಡು ವರ್ಷಗಳಾಗಿದ್ದರೂ ಮಸೂದೆಯ ಶೀಘ್ರ ಅನುಷ್ಠಾನಕ್ಕೆ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ನ್ಯಾಯದಾನ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೮೬ (೧೨೪೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಕ್ಕಳ ಮೇಲಿನ ಕ್ರೌರ್ಯ ಮತ್ತು ಶೋಷಣೆ, ಲೈಂಗಿಕ ದೌರ್ಜನ್ಯ ಮುಂತಾದವುಗಳು ನಿರಂತರವಾಗಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ, ಆರೋಗ್ಯ, ರಕ್ಷಣೆ, ಊಟ, ಮನರಂಜನೆ, ಆತಂಕರಹಿತ ವಾತಾವರಣ ಒದಗಿಸುತ್ತಾ ಮಕ್ಕಳ ಹಕ್ಕುಗಳನ್ನು ರಕ್ಷಿಸಿ ನ್ಯಾಯದಾನ ಮಾಡುವಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಬಾಲ ಕಾರ್ಮಿಕರು, ಮನೆ ಕೆಲಸದಲ್ಲಿ ತೊಡಗಿದ ಮಕ್ಕಳನ್ನು ಸಂಕಷ್ಟದಿಂದ ಪಾರು ಮಾಡಿ ಉತ್ತಮ ಬಾಲ್ಯ ಮತ್ತು ಬಾಳ್ವೆ ನೀಡಲು ಸರ್ಕಾರವು ಅಗತ್ಯ ಕಠಿಣ ಕ್ರಮಗಳನ್ನು ಕೈಗೊಳ್ಳುವುದೇ ?

## ಕರ್ನಾಟಕ ಗೃಹ ಮಂಡಳಿ ನಿರ್ಮಿಸಿದ ವಸತಿ ಗೃಹಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೮೭ (೧೨೪೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ ನಿರ್ಮಿಸಿ ಲೋಕೋಪಯೋಗಿ ಇಲಾಖೆಯ ವಶಕ್ಕೆ ನೀಡಲಾಗಿರುವ ವಸತಿ ಗೃಹಗಳೆಷ್ಟು ;

(ಆ) ಕೊಪ್ಪಳ ನಗರದಲ್ಲಿ ಕರ್ನಾಟಕ ಗೃಹ ಮಂಡಳಿ ವಸತಿ ಗೃಹಗಳನ್ನು ಲೋಕೋಪಯೋಗಿ ಇಲಾಖೆ ವಶದಿಂದ ವಸತಿ ಗೃಹಗಳಲ್ಲಿ ವಾಸವಿದ್ದವರ ಸ್ವಂತಕ್ಕೆ ನೀಡುವಾಗ ಗಣನೆಗೆ ತೆಗೆದುಕೊಳ್ಳಲಾದ ಮಾನದಂಡಗಳೇನು ; ಹಾಗೂ ಹಂಚಿಕೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯಿಂದ ಷರತ್ತುಗಳ ಪ್ರಕಾರ ನಿರಾಪೇಕ್ಷಣಾ ಪತ್ರ (ಎನ್.ಓ.ಸಿ.) ಪಡೆಯಲಾಗಿದೆಯೇ ;

(ಇ) ವಸತಿ ಗೃಹಗಳಿಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯಿಂದ ಪಾವತಿಸಲಾಗಿರುವ ಹಣವೆಷ್ಟು ; ಗೃಹ ಮಂಡಳಿಯು ಹಾಲಿ ವಾಸಿಗರಿಗೆ ಹಂಚಿಕೆ ಮಾಡುವಾಗ ಪ್ರಸ್ತುತ ಮಾರುಕಟ್ಟೆ ದರಕ್ಕೆ ನೀಡಲಾಗಿದೆಯೇ ;

(ಈ) ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಸಾಕಷ್ಟು ವಸತಿ ಗೃಹಗಳು ಇರುವುದಿಲ್ಲ ವಾದ್ದರಿಂದ ಈ ವಸತಿ ಗೃಹಗಳನ್ನು ವಾಸಿಗರಿಗೆ ಹಂಚಿಕೆ ಮಾಡಬಾರದೆಂದು ಲೋಕೋಪಯೋಗಿ ಇಲಾಖೆಯಿಂದ ಒತ್ತಡವಿದ್ದಾಗ್ಯೂ ಕ್ರಮ ಕೈಗೊಳ್ಳದಿರುವುದು ಸರಿಯೇ ?

## ಓವರ್ ಹೆಡ್ ಟ್ಯಾಂಕ್‌ಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೮೮ (೧೨೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ನೀರಿನ ಓವರ್ ಹೆಡ್ ಟ್ಯಾಂಕ್‌ಗಳ ಸಂಖ್ಯೆ ಎಷ್ಟು (ವಿವರಗಳನ್ನು ತಾಲ್ಲೂಕುವಾರು ನೀಡುವುದು) ;

(ಆ) ಸದರಿ ಟ್ಯಾಂಕ್‌ಗಳಲ್ಲಿ ಸುಸ್ಥಿತಿಯಲ್ಲಿರುವ, ಸುಸ್ಥಿತಿಯಲ್ಲಿರದ ಟ್ಯಾಂಕ್‌ಗಳ ವಿವರಗಳನ್ನು ನೀಡುವುದು ;

(ಇ) ಈ ಟ್ಯಾಂಕ್‌ಗಳನ್ನು ನಿರ್ಮಿಸಿ ಪೈಪ್ ಜೋಡಣೆ ಕಾರ್ಯ ಬಾಕಿ ಇರುವ ಅಥವಾ ಸಂಪರ್ಕ ನೀಡದೇ ಇರುವ ಎಷ್ಟು ಪ್ರಕರಣಗಳು ಪತ್ತೆಯಾಗಿವೆ ;

(ಈ) ಈ ಕುರಿತು ಸರಕಾರ ಕೈಗೊಂಡ ಕ್ರಮಗಳೇನು ;

(ಉ) ಜಿಲ್ಲೆಯಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಸಮಸ್ಯಾತ್ಮಕ ಗ್ರಾಮಗಳೆಷ್ಟು ; ಅವು ಯಾವುವು (ವಿವರಗಳನ್ನು ನೀಡುವುದು) ?

## ಎಸ್.ಎಸ್.ಎಲ್.ಸಿ. ಫಲಿತಾಂಶ ಹಾಗೂ ಟಿ.ಇ.ಟಿ. ಶಿಕ್ಷಕರ ಅರ್ಹತಾ ಪರೀಕ್ಷೆ

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :-**

೯೮೯ (೧೨೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿಜಾಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳು ಎಸ್.ಎಸ್.ಎಲ್.ಸಿ. ಹಾಗೂ ಪದವಿ ಪೂರ್ವ ಕಾಲೇಜುಗಳ ಫಲಿತಾಂಶದಲ್ಲಿ ರಾಜ್ಯದಲ್ಲಿ ಯಾವ ಯಾವ ಕ್ರಮಾಂಕದಲ್ಲಿವೆ ;

(ಆ) ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು.ಸಿ. ಪರೀಕ್ಷಾ ಫಲಿತಾಂಶ ಸುಧಾರಣೆಗೆ ಈ ಜಿಲ್ಲೆಗಳಲ್ಲಿ ಮಾಡಿರುವ ಹಾಗೂ ಅನುಷ್ಠಾನಗೊಳಿಸಿರುವ ಸಂಪೂರ್ಣ ಕಾರ್ಯ ಯೋಜನೆ ವರದಿ ನೀಡುವುದು ;

(ಇ) ರಾಜ್ಯ ಸರ್ಕಾರ ನಡೆಸಲಿರುವ/ನಡೆಸಿರುವ ಟಿ.ಇ.ಟಿ. ಶಿಕ್ಷಕರ ಅರ್ಹತಾ ಪರೀಕ್ಷೆ ಕುರಿತು ಸಂಪೂರ್ಣ ಮಾಹಿತಿ ನೀಡುವುದು ;

(ಈ) ನಿವೃತ್ತಿಯಾಗಿರುವ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಅನುದಾನಿತ ಶಿಕ್ಷಕರ ಪಿಂಚಣಿ ನಿಗದಿಗೊಳಿಸದೇ ಸಮಸ್ಯೆಯಾಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ನಿವಾರಣೆಗೆ ಸರ್ಕಾರದ ಕ್ರಮವೇನು ;

(ಉ) ರಾಜ್ಯದಲ್ಲಿ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಾಲಾ ಕಾಲೇಜುಗಳ ಹಂತದಲ್ಲಿ ಹೊಸ ಪಠ್ಯಕ್ರಮ ಹಾಗೂ ಹೊಸ ಪುಸ್ತಕವನ್ನು ಯಾವಾಗ ಪರಿಚಯಿಸಲಾಗಿದೆ ;

(ಊ) ನೂತನ ಪಠ್ಯಕ್ರಮ ಹಾಗೂ ಪಠ್ಯ ಬೋಧಿಸುವ ದೃಷ್ಟಿಯಲ್ಲಿ ಶಿಕ್ಷಕರನ್ನು ತಯಾರು ಮಾಡುವ ದೃಷ್ಟಿಯಿಂದ ಯಾವ ಯಾವ ಹಂತದ ಎಷ್ಟು ತರಬೇತಿಗಳನ್ನು ಎಷ್ಟು ಜನ ಶಿಕ್ಷಕರಿಗೆ, ಎಷ್ಟು ಬಾರಿ ನೀಡಲಾಗಿದೆಯೆಂದು ಸಂಪೂರ್ಣ ವಿವರ ನೀಡುವುದು ;

(ಋ) ಮಧ್ಯಾಹ್ನದ ಬಿಸಿಯೂಟದ ಯೋಜನೆಯನ್ನು ಯಾವ ಯಾವ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ವಿಸ್ತರಿಸಲಾಗಿದೆ ;

(ೠ) ಒಂದೇ ಶಾಲೆಯಲ್ಲಿ ಅನುದಾನಿತ, ಅನುದಾನ ರಹಿತ ಈ ಎರಡೂ ವಿಭಾಗಗಳಿದ್ದು, ತರಗತಿಗಳು ನಡೆಯುತ್ತಿದ್ದರೆ, ಇಂತಹ ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟದ ಯೋಜನೆ ಜಾರಿಗೆ ಇರುವ ನಿಯಮ ಹಾಗೂ ಕ್ರಮವೇನು ?

## ನಿರಾಶ್ರಿತರಿಗೆ ನಿವೇಶನ ಹಂಚಿಕೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೯೦ (೧೨೪೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜೀವ್‌ಗಾಂಧಿ ವಸತಿ ಯೋಜನೆಯಡಿ ನಿರಾಶ್ರಿತರಿಗೆ ನಿವೇಶನ ಹಂಚಿಕೆ ಮಾಡಲು ಬೆಂಗಳೂರು ಉತ್ತರ ತಾಲ್ಲೂಕು, ಬ್ಯಾಟರಾಯನಪುರ ನಗರಸಭೆ ವ್ಯಾಪ್ತಿಯೊಳಗಿನ ಸಿಂಗಾಪುರ ಬಡಾವಣೆಯ ಸರ್ವೆ ನಂ. ೧೧೯ರಲ್ಲಿ ರಚಿಸಿರುವ ೨೦ x ೩೦ ಸುತ್ತಳತೆಯ ನಿವೇಶನಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೦೨ರಲ್ಲಿ ಈಗಾಗಲೇ ಕೆಲವು ಫಲಾನುಭವಿಗಳಿಗೆ ನಿವೇಶನದ ಹಕ್ಕುಪತ್ರ ವಿತರಣೆ ಮಾಡಿದ್ದು, ಈ ಸಂಬಂಧ ಉಪ ನೋಂದಣಾಧಿಕಾರಿಗಳು ನಿವೇಶನದ ಮೌಲ್ಯವನ್ನು ಕಟ್ಟಿಸಿಕೊಂಡು ನೋಂದಣಿ ಮಾಡಿಕೊಂಡಿದ್ದರೂ ಸಹ ಸ್ವಾಧೀನತೆ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈಗಾಗಲೇ ಎಷ್ಟು ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಲಾಗಿದೆ ; ಫಲಾನುಭವಿಗಳ ಪಟ್ಟಿಯನ್ನು ನೀಡುವುದು ;

(ಈ) ಉಳಿದ ಫಲಾನುಭವಿಗಳಿಗೆ ಎಷ್ಟು ದಿನಗಳಲ್ಲಿ ನಿವೇಶನದ ಸ್ವಾಧೀನತೆಯನ್ನು ನೀಡಲು ಕ್ರಮ ಕೈಗೊಳ್ಳಲಾಗುವುದು ?

## ಪ್ರವಾಸೋದ್ಯಮ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೯೧ (೧೨೫೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ವಿವಿಧ ಯೋಜನೆ ಅಡಿಯಲ್ಲಿ ಕೈಗೊಂಡ ಕಾಮಗಾರಿಗಳ ವಿವರ (ಹತ್ತು ವರ್ಷಗಳಿಂದ)ಗಳೇನು ;

(ಆ) ಮುಂದಿನ ಐದು ವರ್ಷಕ್ಕೆ ಸರ್ಕಾರ ಪ್ರವಾಸೋದ್ಯಮ ಅಭಿವೃದ್ಧಿಗೆ ಕೈಗೊಂಡ ಯೋಜನೆ (matter plan) ಗಳೇನು ;

(ಇ) ವರ್ಷವಾರು ರಾಜ್ಯಕ್ಕೆ ಬರುವ ವಿದೇಶಿ ಪ್ರವಾಸಿಗರ ಸಂಖ್ಯೆ ಎಷ್ಟು ; ಇದರಲ್ಲಿ ಯಾವ ದೇಶದ ಪ್ರವಾಸಿಗರು ಹೆಚ್ಚು ಪ್ರವಾಸ ಕೈಗೊಳ್ಳುವರು (ಹತ್ತು ವರ್ಷಗಳ ವಿವರಣೆಯೊಂದಿಗೆ) ;

(ಈ) ರಾಜ್ಯದಲ್ಲಿರುವ ಯಾತ್ರಿ ನಿವಾಸ್ ಹೋಟೆಲ್‌ಗಳ ವಿವರ ನೀಡುವುದು ; ಇವುಗಳ ಪೈಕಿ ಎಷ್ಟು ಹೋಟೆಲ್‌ಗಳನ್ನು ಇಲಾಖೆ ನಡೆಸುತ್ತಿದೆ ; ಎಷ್ಟು ಖಾಸಗಿಯವರಿಂದ ನಡೆಯುತ್ತಿವೆ ;

(ಉ) ಹೊರಗುತ್ತಿಗೆ ನೀಡಿದ ಹೋಟೆಲ್‌ಗಳ ವಿವರ ನೀಡುವುದು (ಗುತ್ತಿಗೆ ಪಡೆದ ವಿವರಗಳೊಂದಿಗೆ) ;

(ಊ) ಪ್ರವಾಸೋದ್ಯಮ ಇಲಾಖೆಯಿಂದ ಎಸ್‌ಸಿ/ಎಸ್‌ಟಿ ಫಲಾನುಭವಿಗಳಿಗೆ ನೀಡಿರುವ ವಾಹನಗಳು ಎಷ್ಟು ; ಇವು ಯಾವ ಕಂಪನಿಯಿಂದ ಸರಬರಾಜು ಮಾಡಲಾಗಿರುತ್ತದೆ ;

(ಋ) ಪ್ರವಾಸೋದ್ಯಮ ಇಲಾಖೆಯಿಂದ ಸರ್ಕಾರಕ್ಕೆ ೨೦೧೩-೧೪ರಲ್ಲಿ ಬಂದ ಆದಾಯವೆಷ್ಟು ?

## ಪ್ರೌಢಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಕರ ಕೊರತೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೯೨ (೧೨೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪ್ರೌಢಶಾಲೆಗಳ ಒಟ್ಟು ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ರಾಜ್ಯದ ಪ್ರೌಢಶಾಲೆಗಳಲ್ಲಿ ಇರುವ ಇಂಗ್ಲೀಷ್ ಶಿಕ್ಷಕರ ಒಟ್ಟು ಸಂಖ್ಯೆ ಎಷ್ಟು ;

(ಇ) ರಾಜ್ಯದ ಎಷ್ಟು ಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಕರಿಲ್ಲದೆ ಬೇರೆ ವಿಷಯದ ಶಿಕ್ಷಕರು ಇಂಗ್ಲೀಷ್ ಪಾಠ ಕಲಿಸುತ್ತಿದ್ದಾರೆ ; ಇದರಿಂದ ಆ ಶಾಲೆಯ ಮಕ್ಕಳಲ್ಲಿ ಇಂಗ್ಲೀಷ್ ಪರಿಪೂರ್ಣ ಜ್ಞಾನದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ಬಗ್ಗೆ ಕೈಗೊಂಡ ಕ್ರಮವೇನು ;

(ಈ) ಕಳೆದ ವಾರ್ಷಿಕ ಹತ್ತನೇ ತರಗತಿ ಪರೀಕ್ಷೆಯಲ್ಲಿ ಇಂಗ್ಲೀಷ್ ವಿಷಯದಲ್ಲಿ ಅನುತ್ತೀರ್ಣರಾದ ಪ್ರೌಢಶಾಲೆಗಳ ವಿವರ ನೀಡುವುದು ಹಾಗೂ ಆ ಶಾಲೆಗಳಲ್ಲಿ ಇಂಗ್ಲೀಷ್ ವಿಷಯಗಳಲ್ಲಿ ವಿದ್ಯಾರ್ಥಿಗಳು ಅನುತ್ತೀರ್ಣರಾಗಲು ಕಾರಣವೇನು ;

(ಉ) ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ೨೭ ಪ್ರೌಢ ಶಾಲೆಗಳಲ್ಲಿ ಎಷ್ಟು ಇಂಗ್ಲೀಷ್ ಶಿಕ್ಷಕರ ಹುದ್ದೆಗಳಿವೆ ಮತ್ತು ಎಷ್ಟು ಇಂಗ್ಲೀಷ್ ಶಿಕ್ಷಕರಿದ್ದಾರೆ (ವಿವರ ನೀಡುವುದು) ; ಇಲ್ಲವಾದಲ್ಲಿ ಕೈಗೊಂಡ ಕ್ರಮವೇನು ?

## ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಕಾನೂನಾದ ಶಿಕ್ಷಣ ಹಕ್ಕು ಕಾಯ್ದೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೯೩ (೧೨೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಕಾನೂನಾದ ಶಿಕ್ಷಣ ಹಕ್ಕು ಕಾಯ್ದೆಯನ್ನು ರಾಜ್ಯದಲ್ಲಿ ಎಂದಿನಿಂದ ಜಾರಿಗೆ ತರಲಾಗಿದೆ ;

(ಆ) ಈ ನಿಯಮದಡಿ ಒಟ್ಟು ಎಷ್ಟು ವಿದ್ಯಾರ್ಥಿಗಳು ಪ್ರವೇಶವನ್ನು ಪಡೆದುಕೊಂಡಿದ್ದಾರೆ (ಜಿಲ್ಲಾವಾರು ಮತ್ತು ವರ್ಷವಾರು ಮಾಹಿತಿಯನ್ನು ಒದಗಿಸುವುದು) ;

(ಇ) ಈ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಲ್ಲಿ ಸರ್ಕಾರ ಅನುಸರಿಸುವ ಮಾನದಂಡಗಳು ಏನು ?

## ನೂತನವಾಗಿ ಕೈಗೊಳ್ಳುವ ರೈಲ್ವೆ ಕಾಮಗಾರಿಗಳು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೯೪ (೧೨೫೧) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ರಾಜ್ಯದಲ್ಲಿ ನೂತನವಾಗಿ ಕೈಗೊಳ್ಳಲಿರುವ ರೈಲ್ವೆ ಕಾಮಗಾರಿಗಳು ಎಷ್ಟು ;

(ಆ) ಇಂತಹ ಕಾಮಗಾರಿಗಳಿಗೆ ತಗಲುವ ಒಟ್ಟು ಅಂದಾಜು ವೆಚ್ಚವೆಷ್ಟು ;

(ಇ) ಇಂತಹ ಅಭಿವೃದ್ಧಿ ಯೋಜನೆಗಳಿಗೆ ರಾಜ್ಯ ಸರ್ಕಾರವು ಯಾವ ಅನುಪಾತದ ಮೇಲೆ ಅನುದಾನ ಬಿಡುಗಡೆ ಮಾಡಬೇಕಾಗುವುದು ;

(ಈ) ರಾಜ್ಯ ಸರ್ಕಾರವು ಈಗ ಯಾವ ಯಾವ ಕಾಮಗಾರಿಗಳಿಗೆ ತನ್ನ ಪಾಲಿನ ಅನುದಾನ ಬಿಡುಗಡೆ ಮಾಡಿದೆ (ವಿವರ ಒದಗಿಸುವುದು) ?

## ವೀರರಾಣಿ ಕಿತ್ತೂರು ಚೆನ್ನಮ್ಮಳ ಕೋಟೆ ನಿರ್ವಹಣೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೯೫ (೧೨೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೀರರಾಣಿ ಕಿತ್ತೂರು ಚೆನ್ನಮ್ಮಳ ಕೋಟೆಯನ್ನು ರಾಷ್ಟ್ರೀಯ ಸ್ಮಾರಕವನ್ನಾಗಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಬೆಳಗಾವಿ ಜಿಲ್ಲೆಯ ಕಿತ್ತೂರು ಕೋಟೆಯಲ್ಲಿ ಮೂಲ ಸೌಲಭ್ಯದ ಕೊರತೆ ಮತ್ತು ಸಿಬ್ಬಂದಿಯ ಅಭಾವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯ ಒದಗಿಸಲು ಕೈಗೊಂಡ ಕ್ರಮಗಳೇನು (ವಿವರ ಒದಗಿಸುವುದು) ;

(ಈ) ಕೋಟೆಯ ಸ್ವಚ್ಛತೆಗೆ ಮತ್ತು ಉದ್ಯಾನವನದ ನಿರ್ವಹಣೆಗೆ ಸೇರಿದಂತೆ ವಿವಿಧ ಕೆಲಸಗಳಿಗೆ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ?

## ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೯೯೬ (೧೨೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿಯೇ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯು ಕಳೆದ ಹಲವಾರು ವರ್ಷಗಳಿಂದ ಎಸ್.ಎಸ್.ಎಲ್.ಸಿ. ಫಲಿತಾಂಶದಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಇಲ್ಲಿನ ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಮೂಲಭೂತ ಸೌಲಭ್ಯಗಳಾದ ಶಾಲಾ ಕೋಣೆಗಳು, ಕುಡಿಯುವ ನೀರು ಹಾಗೂ ಶೌಚಾಲಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ವಿಷಯದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾವ ಯಾವ ಶಾಲೆಗಳಲ್ಲಿ ಶಿಕ್ಷಕರ, ಶಾಲಾ ಕೋಣೆಗಳ, ಕುಡಿಯುವ ನೀರು, ಶೌಚಾಲಯಗಳ ಕೊರತೆ ಇದೆ (ವಿವರ ನೀಡುವುದು) ;

(ಈ) ಸರ್ಕಾರವು ಈ ಕೊರತೆ ನೀಗಿಸಲು ಕಾಲಬದ್ಧ ಯೋಜನೆಯನ್ನು ಕೈಗೊಳ್ಳಲಿದೆಯೇ ?

## **ಖಾಸಗಿ ವಿಶ್ವವಿದ್ಯಾಲಯಗಳು**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೯೭ (೧೨೫೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಖಾಸಗಿ ವಿಶ್ವವಿದ್ಯಾಲಯಗಳೆಷ್ಟು ; ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಸರ್ಕಾರದಲ್ಲಿರುವ ಮಾನದಂಡಗಳೇನು ;

(ಆ) ಈಗ ಸ್ಥಾಪಿಸಿರುವ ಖಾಸಗಿ ವಿಶ್ವವಿದ್ಯಾಲಯಗಳು ಸರ್ಕಾರದ ಎಲ್ಲಾ ಮಾನದಂಡಗಳನ್ನು ಪೂರೈಸಿವೆಯೇ ;

(ಇ) ದೇಶದ ಮತ್ತು ವಿಶ್ವದ ಅನೇಕ ವಿಶ್ವವಿದ್ಯಾಲಯಗಳು ರಾಜ್ಯದಲ್ಲಿ ಅಸ್ತಿತ್ವಕ್ಕೆ ಬರುತ್ತಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯಗಳು ಶೈಕ್ಷಣಿಕ ಗುಣಮಟ್ಟವನ್ನು ಕಾಯ್ದುಕೊಳ್ಳಲು ಸರ್ಕಾರ ಏನು ಕ್ರಮ ಜರುಗಿಸಲಿದೆ ;

(ಈ) ಹಾಗಿದ್ದಲ್ಲಿ, ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಅಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಜರುಗಿಸಲಿದೆಯೇ ?

## **ಪ್ರತ್ಯೇಕ ವಿಶ್ವವಿದ್ಯಾಲಯ ಮಂಜೂರು**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೯೮ (೧೨೬೦) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಗೆ ಪ್ರತ್ಯೇಕವಾದ ವಿಶ್ವವಿದ್ಯಾನಿಲಯ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಆ) ಜಿಲ್ಲೆಯಲ್ಲಿ ಪ್ರಸ್ತುತ ಹೊಸ ಸ್ನಾತಕೋತ್ತರ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರ ಮಂಜೂರಾತಿ ನೀಡಿದೆಯೇ ; ಹೌದಾದಲ್ಲಿ, ಇದಕ್ಕೆ ಪೂರಕವಾಗಿ ಒದಗಿಸಬೇಕಾದ ಸೌಕರ್ಯಗಳ ಬಗ್ಗೆ ಕೈಗೊಂಡ ಕ್ರಮಗಳೇನು ; ಈ ಶೈಕ್ಷಣಿಕ ವರ್ಷದಲ್ಲಿ ಕೇಂದ್ರವು ಪ್ರಾರಂಭಗೊಳ್ಳುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಶಾಶ್ವತ ಅಂಗವೈಕಲ್ಯತೆ ಮತ್ತು ಬುದ್ಧಿಮಾಂದ್ಯರಿಗೆ ವೈದ್ಯಕೀಯ ವೆಚ್ಚ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೯೯೯ (೧೨೫೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಂಡೋಸಲ್ಫಾನ್ ಹಾಗೂ ಇನ್ನಿತರ ಕಾರಣಗಳಿಂದಾಗಿ ಶಾಶ್ವತ ಅಂಗವೈಕಲ್ಯತೆಗೆ ಮತ್ತು ಬುದ್ಧಿಮಾಂದ್ಯತೆಗೆ ಒಳಗಾಗಿರುವ ನತದೃಷ್ಟರಿಗೆ ಪ್ರತಿ ತಿಂಗಳು ತಗಲುವ ವೈದ್ಯಕೀಯ ವೆಚ್ಚವನ್ನು ವಿವಿಧ ಯೋಜನೆಗಳಿಗೆ ಕಾಯ್ದಿರಿಸಿದ ಅನುದಾನದಿಂದ ಶೇ ೩ ರಷ್ಟು ಕಾಯ್ದಿರಿಸಿ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವಾಗಿನಿಂದ ನೀಡಲಾಗುವುದು ; ಇಲ್ಲವಾದಲ್ಲಿ ಕಾರಣವೇನು ;

(ಆ) ಇವರನ್ನು ಸಲಹುವ ಪೋಷಕರಿಗೆ ಮಾಸಿಕ ವಿಶೇಷ ಭತ್ಯೆಯನ್ನು ನೀಡುವ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ ; ಮನಗಂಡಲ್ಲಿ, ತೆಗೆದುಕೊಳ್ಳುವ ಅಗತ್ಯ ಕ್ರಮಗಳೇನು ; ಇಲ್ಲವಾದಲ್ಲಿ ಕಾರಣವೇನು ;

(ಇ) ಅತ್ಯಂತ ಸರಳ ನಿಯಮದಡಿ ವೈದ್ಯಕೀಯ ವೆಚ್ಚ ಮತ್ತು ಪೋಷಕರಿಗೆ ಭತ್ಯೆಯನ್ನು ನೀಡಲು ಶೇಕಡಾ ೩೦ರ ಅನುದಾನವನ್ನು ವಿವಿಧ ಯೋಜನೆಯಡಿ ಕಾಯ್ದಿರಿಸಲು ಸರ್ಕಾರವು ಯಾವಾಗ ಆದೇಶವನ್ನು ಹೊರಡಿಸಲಿದೆ ?

## ಮರು ಮೌಲ್ಯಮಾಪನದಲ್ಲಿ ವಿಧಿಸುವ ಶುಲ್ಕ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೦೦ (೧೨೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪದವಿ ಪೂರ್ವ ವಿದ್ಯಾರ್ಥಿಗಳು ಇಚ್ಛಿಸುವ ಉತ್ತರ ಪತ್ರಿಕೆಯ ಮರು ಮೌಲ್ಯಮಾಪನಕ್ಕೆ ಪದವಿ ಪೂರ್ವ ಶಿಕ್ಷಣ ಮಂಡಳಿಯಿಂದ ವಿಧಿಸುವ ಶುಲ್ಕವೆಷ್ಟು ;

(ಆ) ಮರು ಮೌಲ್ಯಮಾಪನದಲ್ಲಿ ೬ (ಆರು) ಅಂಕಕ್ಕಿಂತ ಕಡಿಮೆ ಹೆಚ್ಚುವರಿ ಅಂಕ ದೊರೆತ ಉತ್ತರ ಪತ್ರಿಕೆಗಳನ್ನು ಪರಿಗಣಿಸದಿರುವುದು ನಿಜವೇ ; ನಿಜವಾದಲ್ಲಿ ಅದರ ಮಾನದಂಡವೇನು ;

(ಇ) ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ೦.೦೦೧ ಅಂಕವೂ ಸಹ ಅತೀ ಪ್ರಾಮುಖ್ಯವಾದುದು ಎಂಬುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ ಮೇಲಿನ ನಿಯಮವನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ; ಇಲ್ಲವಾದಲ್ಲಿ, ಈ ತೀರ್ಮಾನ ಸರಿಯೇ ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ PMGSY ಅಡಿಯಲ್ಲಿ ಕರೆಯಲಾದ ಕಾಮಗಾರಿಗಳ ಟೆಂಡರ್ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೦೧ (೧೨೫೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ಕಳೆದ ಎರಡು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಪ್ರಧಾನಮಂತ್ರಿ ಗ್ರಾಮೀಣ ರಸ್ತೆ ಯೋಜನೆ (PMGSY) ಯಡಿಯಲ್ಲಿ ಟೆಂಡರ್ ಕರೆಯಲಾದ ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು (ವರ್ಷವಾರು, ಕಾಮಗಾರಿವಾರು ವಿವರ ನೀಡುವುದು) ;

(ಆ) ಕುಂದಾಪುರ ತಾಲ್ಲೂಕಿನ ಹೆರಿಗೆವಳ್ಳಿ ಗ್ರಾಮದ ಇರ್ಗಿ ರಸ್ತೆಯ ಅಭಿವೃದ್ಧಿ ಕಾಮಗಾರಿಯನ್ನು ಪ್ರಧಾನ ಮಂತ್ರಿ ಗ್ರಾಮೀಣ ರಸ್ತೆ ಯೋಜನೆ (PMGSY) ಯಡಿ ಟೆಂಡರ್ ಕರೆಯಲಾಗಿದ್ದು, ಆದರೆ, ಇಲ್ಲಿಯ ತನಕ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸದೆ ಕಾಮಗಾರಿ ಪ್ರಾರಂಭಿಸದಿರಲು ಕಾರಣವೇನು ; ಈ ವಿಳಂಬದಿಂದಾಗಿ ಎಸ್.ಆರ್. (SR) ದರ ಪಟ್ಟಿಯಲ್ಲಿನ ಬದಲಾವಣೆಯಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗುವುದಿಲ್ಲವೆ ; ಈ ನಷ್ಟವನ್ನು ತುಂಬಲು ಯಾರನ್ನು ಹೊಣೆ ಮಾಡಲಾಗುವುದು ?

## ಇಂದಿರಾ ಅವಾಜ್ ಯೋಜನೆಯಡಿ ಮನೆಗಳ ಉನ್ನತೀಕರಣ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೦೨ (೧೨೫೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇಂದಿರಾ ಅವಾಜ್ ವಸತಿ ಯೋಜನೆಯಡಿ ಮನೆಗಳ ಉನ್ನತೀಕರಣಕ್ಕಾಗಿ ಕಳೆದ ೧೦-೧೫ ವರ್ಷಗಳಿಂದ ನಿಗದಿಪಡಿಸಿದ ಘಟಕ ವೆಚ್ಚ ರೂ. ೧೫,೦೦೦/- (ರೂಪಾಯಿ ಹದಿನೈದು ಸಾವಿರ) ವನ್ನು ಈ ಸಾಲಿನಲ್ಲಿ ಹೆಚ್ಚಿಸುವ ಪ್ರಸ್ತಾವನೆಯೇನಾದರೂ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಆ) ರಾಜ್ಯದಲ್ಲಿ ಶಿಥಿಲಗೊಂಡ ಮನೆಗಳನ್ನು ವಾಸಕ್ಕೆ ಯೋಗ್ಯವಾಗುವಂತೆ ದುರಸ್ತಿಪಡಿಸಲು ಘಟಕ ವೆಚ್ಚವನ್ನು ಕನಿಷ್ಠ ರೂ. ೫೦,೦೦೦/- (ರೂಪಾಯಿ ಐವತ್ತು ಸಾವಿರ) ಕ್ಕೆ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಚಿತ್ರದುರ್ಗ ದಾವಣಗೆರೆ ಜಿಲ್ಲೆಗಳಲ್ಲಿ R.O. ಪ್ಲಾಂಟ್ ಸ್ಥಾಪಿಸುವ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೦೦೩ (೧೨೧೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಶುದ್ಧ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಇಲಾಖೆಯಿಂದ ಶುದ್ಧ ನೀರಿನ ಘಟಕ (ಆರ್.ಓ.ಪ್ಲಾಂಟ್) ಸ್ಥಾಪಿಸಲು ಕೈಗೊಂಡಿರುವ ಕ್ರಮಗಳೇನು (ತಾಲ್ಲೂಕುವಾರು ಮಾಹಿತಿ ಒದಗಿಸುವುದು) ;

(ಆ) ಪ್ರತಿ ಆರ್.ಓ. ಪ್ಲಾಂಟ್ ಸ್ಥಾಪನೆಗೆ ಅಂದಾಜು ವೆಚ್ಚ ಎಷ್ಟು ; ಇದಕ್ಕೆ ಕೇಂದ್ರ ಸರ್ಕಾರದಿಂದ ದೊರೆಯುವ ಸಹಾಯಧನ ಎಷ್ಟು (ವಿವರ ನೀಡುವುದು) ?

## ಗ್ರಾಮ ಪಂಚಾಯಿತಿ ಸಭೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೦೪ (೧೧೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳಿವೆ ; ಇವುಗಳು ಎಷ್ಟು ಬಾರಿ ಗ್ರಾಮ ಸಭೆಗಳನ್ನು ನಡೆಸಿವೆ ;

(ಆ) ಸರ್ಕಾರವು ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ ನಿಯಾವಳಿಗಳೇನಾದರೂ ರೂಪಿಸಿದೆಯೇ ; ಸದರಿ ನಿಯಮದ ಪ್ರಕಾರ ಕಳೆದ ೩ ವರ್ಷಗಳಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳು ಸಭೆಗಳನ್ನು ನಡೆಸಿವೆಯೇ ;

(ಇ) ನಡೆಸದೇ ಇರುವ ಗ್ರಾಮ ಪಂಚಾಯಿತಿಗಳು ಎಷ್ಟು ; ನಡೆಸದಿರಲು ಕಾರಣವೇನು (ಗ್ರಾಮ ಪಂಚಾಯಿತಿಗಳ ಹೆಸರುಗಳೊಂದಿಗೆ ವಿವರ ನೀಡುವುದು) ;

(ಈ) ಕಡ್ಡಾಯವಾಗಿ ಗ್ರಾಮ ಪಂಚಾಯಿತಿ ಸಭೆಗಳನ್ನು ನಡೆಸಬೇಕೆಂದು ಕಾನೂನನ್ನೇನಾದರೂ ರೂಪಿಸುವ ಯೋಚನೆ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ ವಿಳಂಬ ಮಾಡುತ್ತಿರಲು ಕಾರಣವೇನು ;

(ಉ) ಪ್ರತಿ ಗ್ರಾಮಗಳಿಂದ ಕಾಲಕಾಲಕ್ಕೆ ತೆರಿಗೆಗಳು ಪಾವತಿಯಾಗುತ್ತಿವೆಯೇ ; ಗ್ರಾಮ ಪಂಚಾಯಿತಿಗಳು ಅನುದಾನದ ಹೆಚ್ಚಳದಿಂದ ಸಾಕ್ಷರತೆ ಹೊಂದಿದೆಯೇ ; ಅನುದಾನದ ಹೆಚ್ಚಳದ ಬಗ್ಗೆ ಸರ್ಕಾರ ಚಿಂತಿಸಿದೆಯೇ ;

(ಊ) ರಾಜ್ಯದ ಪ್ರತಿ ಗ್ರಾಮಗಳಲ್ಲೂ ಸ್ವಚ್ಛತೆ, ಪರಿಸರ, ರಕ್ಷಣೆ, ಮಾಲಿನ್ಯ ನಿಯಂತ್ರಣ ಜಾಗೃತಿ ನೀಡಲಾಗಿದೆಯೇ ?

ಪಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂಗಳೂರು-59/ಕಾ.ಸೂ. 0 3375/ 1000 ಪ್ರತಿಗಳು/9-7-14